ಸಂಪುಟ : 9 ಸಂಚಿಕೆ 270 ಪುಟ : 4 ಬೆಲೆ: 3.00 ಶನಿವಾರ ಡಿಸೆಂಬರ್ 7 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 270 Pages : 4 Price : 3.00 Saturday December 7 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 7 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 1 - ಎಸ್ ಎಮ್ ಕೃಷ್ಣ ನಗರ ಪೂರ್ತಿ ಭಾಗಗಳು. ವಾರ್ಡ್ ನಂ. 29 - ರಾಜೀವ್ ಗಾಂಧಿನಗರ, ಭಾಂಡಗೆ ಲೈನ್, ಗುಂಪಿನ ಮನೆ, ಪೊಲೀಸ್ ಸ್ಟೇಷನ್ ಕೆಳಗಿನ ಭಾಗಗಳು, ಸ್ವಿಮ್ಮಿಂಗ್ ಪೂಲ ಕೆಳಗಿನ ಭಾಗಗಳು, ಡಂಬಳದವರ ಲೈನ್, ಚಂದಾವರಿ ಸರ್ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 16, 21 - ಸುಣ್ಣದ ಭಟ್ಟಿ, ಕುಂಬೇಶ್ವರ ನಗರ, ಕುಷ್ಠ ರೋಗ ಕಾಲೋನಿ, ಅಂಬೇಡ್ಕರ್ ನಗರ ಮಸೂತಿ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 21, 22 - ವಿಜಯನಗರ ಶಾಲೆಯ ಭಾಗಗಳು, ಟವರ್ ಕಂಬ, ಕರುಗಲ್ ಲೇಔಟ್, ಕಮತರ ಪ್ಲಾಟ್, ಶಿಗ್ಗಾವಿ ಲೇಔಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 - ಪವಾರ ಅವರ ಲೈನ್, ಶರಣಬಸವೇಶ್ವರ ನಗರ ಪೂರ್ತಿ ಭಾಗಗಳು.

ವಿ.ಸೂ : ಅವಳಿ ನಗರದ ಸಾರ್ವಜನಿಕರು ತಮ್ಮ ನೀರಿನ ಕರವನ್ನು ತುಂಬಲು ತಿಳಿಸಲಾಗಿದೆ. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುವುದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ


**ಘಮಘಮಿಸಿದ ಸಿರಿಧಾನ್ಯ, ಮರೆತು ಹೋದ ಖಾದ್ಯಗಳು | ಪಾಕಸ್ಪರ್ಧೆ ಉದ್ಘಾಟಿಸಿದ ಡಿಸಿ ಗೋವಿಂದರೆಡ್ಡಿ ಕರೆ**

# ಸಿರಿಧಾನ್ಯದಿಂದ ಆರೋಗ್ಯಕರ ಜೀವನ

■ ವಿಜಯಸಾಕ್ಷಿ ಸುದ್ದಿ, ಗದಗ

ಸಿರಿಧಾನ್ಯಗಳು ಕಡಿಮೆ ರಸಗೊಬ್ಬರ ಹಾಗೂ ಕೀಟನಾಶಕಗಳ ಬಳಕೆಯಿಂದ ಬೆಳೆಯುತ್ತಿದ್ದು, ಪೌಷ್ಟಿಕಾಂಶಗಳ ಆಗರವಾಗಿವೆ. ಇವುಗಳ ನಿಯಮಿತವಾದ ಸೇವನೆಯಿಂದ ಈಗಿನ ಜೀವನ ಶೈಲಿಯಲ್ಲಿ ಸಾಮಾನ್ಯವಾಗಿ ಕಂಡುಬರುವ ಸಕ್ಕರೆ ರೋಗ, ರಕ್ತದೊತ್ತಡ, ಬೊಜ್ಜು ಇತ್ಯಾದಿಗಳನ್ನು ಯಶಸ್ವಿಯಾಗಿ ನಿರ್ವಹಿಸಬಹುದು. ಆದ್ದರಿಂದ ಸಿರಿಧಾನ್ಯಗಳನ್ನು ಹೆಚ್ಚು ಹೆಚ್ಚಾಗಿ ಬಳಸಿ ಆರೋಗ್ಯಕರವಾದ ಜೀವನವನ್ನು ನಡೆಸುವಂತೆ ಗದಗ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಕರೆ ನೀಡಿದರು.

ಶುಕ್ರವಾರ ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಸಿರಿಧಾನ್ಯ ಮತ್ತು ಸಾವಯವ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ 2024-25ರ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಕೃಷಿ ಇಲಾಖೆ ಹಾಗೂ ಹುಲಕೋಟಿಯ ಕೆ.ಹೆಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ 'ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ (ಐಚಿಟಿಜ ಖಿಚಿಥಿಜ ಕಡಿಂಜಣಥಿಣ) ಪಾಕ ಸ್ಪರ್ಧೆ'ಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸದರಿ ಸ್ಪರ್ಧೆಯಲ್ಲಿ ಗದಗ ಜಿಲ್ಲೆಯ ವಿವಿಧ ತಾಲೂಕು ಹಾಗೂ ಗ್ರಾಮಗಳಿಂದ ಒಟ್ಟು 59 ಮಹಿಳೆಯರು ವೈವಿಧ್ಯಮಯ ಹಾಗೂ



ರುಚಿಕರವಾದ ವಿವಿಧ ಸಿರಿಧಾನ್ಯದ ಹಾಗೂ ಮರೆತುಹೋದ ಖಾದ್ಯಗಳನ್ನು ಮನೆಯಲ್ಲಿ ತಯಾರಿಸಿಕೊಂಡು ಬಂದು ಪ್ರದರ್ಶಿಸಿದ್ದರು. ಸಿರಿಧಾನ್ಯದ ಸಿಹಿ ಖಾದ್ಯಗಳಲ್ಲಿ ವಿವಿಧ ಪಾಯಸಗಳು, ಹೋಳಿಗೆಗಳು, ಲಾಡುಗಳು, ಹಲ್ವಾ, ಕೇಕ್, ಹಾಲುಬಾಯಿ, ಕಡುಬು ಮತ್ತು ಮಾಲ್ದಿ ಇತ್ಯಾದಿಗಳನ್ನು ರುಚಿಕರವಾಗಿ ತಯಾರಿಸಿ, ಆಕರ್ಷಕವಾಗಿ ಪ್ರದರ್ಶಿಸಿದ್ದರು. ಹಾಗೆಯೇ ಸಿರಿಧಾನ್ಯದ ಖಾರದ ಖಾದ್ಯಗಳಲ್ಲಿ ರುಚಿಕರವಾದ ವಡೆಗಳು, ನುಚ್ಚು, ಅಂಬಲಿ, ಹಪ್ಪಳ, ಚಕ್ಕುಲಿ, ಕಿಚಡಿ, ರೋಲ್ಸ್, ರೊಟ್ಟಿಗಳು, ತಾಲಿಪಟ್ಟುಗಳು, ಎಣ್ಣೆಗಡುಬು, ಪಲಾವ್, ದೋಸೆ, ಮಾಲ್ಟ್ ಇತ್ಯಾದಿಗಳು ನೋಡುಗರನ್ನು ಸವಿಯಲು ಕೈ ಬೀಸಿ ಕರೆಯುತ್ತಿದ್ದವು. ಇವುಗಳಲ್ಲದೇ, ಮರೆತು ಹೋದ ಖಾದ್ಯಗಳ ವಿಭಾಗದಲ್ಲಿ ಪೌಷ್ಟಿಕವಾದ ಗುಳ್ಳಡಿಕೆ ಉಂಡಿ, ಹೊಂಬಾಳೆ ವಡೆ, ಹಲಸಿನ ಎಲೆ ಇಡ್ಲಿ, ಕೇಸುವಿನ ಗಡ್ಡೆಯ ಕಟ್ಲೆಟ್ ಇತ್ಯಾದಿಗಳು ಬಾಯಲ್ಲಿ ನೀರೂರಿಸುವಂತಿದ್ದವು.

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಸುಧಾ ಮಂಕಣಿ, ಉಪ ಕೃಷಿ ನಿರ್ದೇಶಕರಾದ ಸ್ಫೂರ್ತಿ ಜಿ.ಎಸ್ ನಿರ್ಣಾಯಕರಾಗಿ ಭಾಗವಹಿಸಿದ್ದರು. ಸಿರಿಧಾನ್ಯದ ಸಿಹಿ ಖಾದ್ಯಗಳು, ಸಿರಿಧಾನ್ಯದ ಖಾರದ ಖಾದ್ಯಗಳು ಹಾಗೂ ಮರೆತು ಹೋದ ಖಾದ್ಯಗಳ ಮೂರೂ ವಿಭಾಗದಲ್ಲಿ ಪ್ರಥಮ ಬಹುಮಾನ ಪಡೆದವರು ಜನವರಿ-25ರಲ್ಲಿ ಏರ್ಪಡಿಸುವ ರಾಜ್ಯಮಟ್ಟದ ಸಿರಿಧಾನ್ಯದ ಪಾಕ ಸ್ಪರ್ಧೆಯಲ್ಲಿ ಕಡ್ಡಾಯವಾಗಿ ಭಾಗವಹಿಸಲು ತಿಳಿಸಲಾಯಿತು. ಭಾಗವಹಿಸಿದ ಎಲ್ಲಾ ಅಭ್ಯರ್ಥಿಗಳಿಗೂ ಅಭಿನಂದನಾ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸೀಮಾ ಸವಣೂರ, ಮಂಜುನಾಥ ಭರಮಗೌಡರ, ಕೆ.ಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಕೃಷಿ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

> ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣಾ ಮುದುಕಮ್ಮನವರ ಸ್ಪರ್ಧೆಯ ನಿರ್ಣಾಯಕರಾಗಿ ಭಾಗವಹಿಸಿ, ಸ್ಪರ್ಧೆಯಲ್ಲಿ ಎಲ್ಲರೂ ಅತಿ ಉತ್ಸಾಹದಿಂದ ಭಾಗವಹಿಸಿರುವುದು ತುಂಬಾ ಸಂತೋಷಕರವಾಗಿದೆ. ಎಲ್ಲಾ ಖಾದ್ಯಗಳು ಅತ್ಯುತ್ತಮವಾಗಿ ಮೂಡಿ ಬಂದಿದ್ದು, ಎಲ್ಲ ಖಾದ್ಯಗಳೂ ಬಹುಮಾನ ಪಡೆಯಲು ಅರ್ಹತೆ ಇರುವಂತಹ ಖಾದ್ಯಗಳೇ ಆಗಿವೆ ಎಂದು ಅಭಿಪ್ರಾಯಪಟ್ಟರು.

## ಕಾರ್ತಿಕೋತ್ಸವ, ರಸಮಂಜರಿ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ನಗರದ ಪೇಟೆ ವೀರಭದ್ರೇಶ್ವರ ಹಾಗೂ ಕಾಮನಕಟ್ಟಿ ಬಸವಣ್ಣ ದೇವರ ಕಾರ್ತಿಕೋತ್ಸವ, ಅನ್ನಸಂತರ್ಪಣೆ ಮತ್ತು ರಸಮಂಜರಿ ಕಾರ್ಯಕ್ರಮ ಡಿ.7ರಂದು ಸಾಯಂಕಾಲ 7 ಗಂಟೆಗೆ ಪ್ರಾರಂಭವಾಗಲಿದೆ.

ಅರುಣೋದಯ ಸಾಂಸ್ಕೃತಿಕ ಕಲಾತಂಡ ಕೊತಬಾಳ ಇವರಿಂದ ಜನಪದ ವೈವಿಧ್ಯಮಯ ರಸಮಂಜರಿ ಕಾರ್ಯಕ್ರಮ ಜರುಗುವುದು. ಡಿ.8ರಂದು ಮುಂಜಾನೆ 6 ಗಂಟೆಗೆ ರುದ್ರಾಭಿಷೇಕ, ಮಧ್ಯಾಹ್ನ 12 ಗಂಟೆಗೆ ಮಹಾ ಅನ್ನಸಂತರ್ಪಣೆ, ಸಾಯಂಕಾಲ 6 ಗಂಟೆಗೆ ಪಾಲಕಿ ಉತ್ಸವ ಹಾಗೂ ಕಾರ್ತಿಕೋತ್ಸವ ಜರುಗುವುದೆಂದು ಪೇಟೆ ವೀರಭದ್ರೇಶ್ವರ ದೇವಸ್ಥಾನದ ಟ್ರಸ್ಟ್ ಕಮಿಟಿ ಕಾರ್ಯದರ್ಶಿ ಸತೀಶ ಕಾವೇರಿ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.


**ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಆರೋಪ**

# ಕಾಂಗ್ರೆಸ್‌ನದ್ದು ಸಂವಿಧಾನ ವಿರೋಧಿ ನಡೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನದ ರಕ್ಷಕರು ಎಂಬಂತೆ ವರ್ತಿಸುವ ಕಾಂಗ್ರೆಸ್ ನಾಯಕರು, ನಗರಸಭೆಯಲ್ಲಿ ಚುನಾಯಿತ ಆಡಳಿತವನ್ನು ಅಧಿಕಾರಿಗಳಿಗೆ ಅಡ ಇಟ್ಟಿದ್ದಾರೆ. ಚುನಾಯಿತ ಪ್ರತಿನಿಧಿಗಳು ಆಡಳಿತ ನಡೆಸದಂತೆ ಷಡ್ಯಂತ್ರ ನಡೆಸಿದ್ದಾರೆ. ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಮೀಸಲಾತಿಯನ್ನು ಸರಕಾರವೇ ನಿರ್ಧರಿಸಿದ್ದರೂ ಅದೇ ನಿರ್ಧಾರವನ್ನು ಪ್ರಶ್ನಿಸಿ ಕಾಂಗ್ರೆಸ್ ಸದಸ್ಯರು ಹೈಕೋರ್ಟ್ ಮೆಟ್ಟಿಲೇರಿರುವುದು ಸಂವಿಧಾನ ವಿರೋಧಿ ನಡೆಯಾಗಿದೆ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಆರೋಪಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಬರುವ ಜನವರಿ 26ರ ಒಳಗಾಗಿ ನಗರಸಭೆ ಅಧ್ಯಕ್ಷ-ಉಪಾಧ್ಯಕ್ಷರ ಮೀಸಲಾತಿ ಪ್ರಶ್ನಿಸಿ ಹೈಕೋರ್ಟ್ ಮೊರೆ ಹೋಗಿರುವ ಕಾಂಗ್ರೆಸ್ ಸದಸ್ಯರಿಂದ ಅರ್ಜಿ ಹಿಂಪಡೆದು, ನಗರಸಭೆಯಲ್ಲಿ ಚುನಾಯಿತ ಪ್ರತಿನಿಧಿಗಳ ಆಡಳಿತ ಮಂಡಳಿ ರಚನೆಗೆ ಕಾರಣರಾಗದಿದ್ದರೆ ಗಣರಾಜ್ಯೋತ್ಸವ




ದಿನ ಸಚಿವ ಎಚ್.ಕೆ. ಪಾಟೀಲರಿಗೆ ಕಪ್ಪುಬಟ್ಟೆ ಪ್ರದರ್ಶನ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಐತಿಹಾಸಿಕ ವೀರನಾರಾಯಣ ದೇವಸ್ಥಾನದ ಪುನರುತ್ಥಾನಕ್ಕಾಗಿ 1 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಕೆಲಸ ಆರಂಭಿಸಲಾಗಿದೆ. ಆದರೆ ಏನು ಕೆಲಸ ಮಾಡುತ್ತಿದ್ದೇವೆ ಎನ್ನುವ ಬಗ್ಗೆ ಪ್ರವಾಸೋದ್ಯಮ ಇಲಾಖೆ ಬಳಿ ಮಾಹಿತಿಯೇ ಇಲ್ಲ. ಕಾಮಗಾರಿಯ ಮಾಹಿತಿ ಇರದಿದ್ದರೆ, ತರಾತುರಿಯಲ್ಲಿ ದೇವಸ್ಥಾನದ ಗೋಡೆ ಒಡೆದಿರುವುದರ ಹಿಂದೆ ವೈಯಕ್ತಿಕ ಹಿತಾಸಕ್ತಿ ಅಡಗಿರುವುದು ಸ್ಪಷ್ಟವಾಗುತ್ತದೆ ಎಂದು ಆರೋಪಿಸಿದರು.

ಲಕ್ಕುಂಡಿ, ವೀರನಾರಾಯಣ ದೇವಸ್ಥಾನಗಳ ಅಭಿವೃದ್ಧಿಗೂ ಮುನ್ನವೇ ಜವಳಿ ಬಜಾರ್‌ನಲ್ಲಿರುವ ರಾಮೇಶ್ವರ ದೇವಸ್ಥಾನ ಅಭಿವೃದ್ಧಿಗೆ ಒತ್ತು ಕೊಡುವಂತೆ ಮನವಿ ಸಲ್ಲಿಸಿದ್ದೇವೆ. ಆದರೂ ರಾಮೇಶ್ವರ ದೇವಸ್ಥಾನ ಜೀರ್ಣೋದ್ಧಾರ ಆರಂಭವಾಗಿಲ್ಲ. ಅವಳಿ ನಗರದ ಬೀದಿ ದೀಪ ನಿರ್ವಹಣೆ ಆರಂಭವಾಗಿಲ್ಲ. ಈ ಕೂಡಲೇ ಸಚಿವರು ಎಚ್ಚೆತ್ತು ಸಾರ್ವಜನಿಕರ ಸಮಸ್ಯೆಗಳ ಪರಿಹಾರಕ್ಕೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ವೀರಪ್ಪ ಜಿರಲಿ, ಜಿ.ಕೆ. ಕೊಳ್ಳಿಮಠ, ದೇವಪ್ಪ ಮಲ್ಲಸಮುದ್ರ, ಪ್ರಫುಲ್ ಪುಣೇಕರ, ಸಂತೋಷ ಪಾಟೀಲ, ಶರಣಪ್ಪ ಹೂಗಾರ, ಎಂ.ಎಸ್. ಪರ್ವತಗೌಡ್ರ ಉಪಸ್ಥಿತರಿದ್ದರು.

> ರಾಜ್ಯದಲ್ಲಿ ರೈತರ ಹೆಸರಿನಲ್ಲಿ ಮತ್ತೊಮ್ಮೆ ಹಾಲಿನ ದರ ಏರಿಕೆಗೆ ಸರಕಾರ ಸಿದ್ಧವಾಗುತ್ತಿದೆ. ಈಚೆಗಷ್ಟೆ 10 ಎಂಎಲ್ ಹೆಚ್ಚು ಹಾಲು ಕೊಡುವ ನೆಪದಲ್ಲಿ ಹಾಲಿನ ದರ ಏರಿಕೆ ಮಾಡಲಾಗಿದೆ. ಆದರೆ 10 ಎಂಎಲ್ ಹಾಲು ಮಾತ್ರ ಏರಿಕೆಯಾಗಿಲ್ಲ. ಈಗ ಮತ್ತೊಮ್ಮೆ ಹಾಲು, ವಿದ್ಯುತ್ ದರ ಏರಿಕೆ ಮಾಡಿದಲ್ಲಿ ಜನ ದಂಗೆ ಏಳುತ್ತಾರೆ ಎಂದು ವೆಂಕನಗೌಡ ಗೋವಿಂದಗೌಡ್ರ ಎಚ್ಚರಿಸಿದರು.

**ಪತ್ರಿಕಾಗೋಷ್ಠಿಯಲ್ಲಿ ಧಾರವಾಡ ಕೆಸಿಸಿ ಬ್ಯಾಂಕಿನ ನಿರ್ದೇಶಕ ಸಂಗಮೇಶ ಕಂಬಾಳಿಮಠ ಅಸಮಾಧಾನ**

# ಸಂಸದ ಬೊಮ್ಮಾಯಿಯವರಿಂದ ಪಕ್ಷ ವಿರೋಧಿ ಚಟುವಟಿಕೆ




> ಹಾವೇರಿ ಬಿಜೆಪಿ ಜಿಲ್ಲಾಧ್ಯಕ್ಷರು, ಶಿಸ್ತು ಸಮಿತಿಯ ಪದಾಧಿಕಾರಿಗಳು ಬಸವರಾಜ ಬೊಮ್ಮಾಯಿ ನಿರ್ದೇಶನದಂತೆ ನನ್ನನ್ನು ಪಕ್ಷದಿಂದ ಉಚ್ಚಾಟಿಸಿದ್ದಾರೆ. ಉಚ್ಚಾಟನೆಯ ನಿಯಮಗಳನ್ನು ಪಾಲಿಸುವ ಸೌಜನ್ಯವೂ ಇಲ್ಲದೇ, ಒಬ್ಬ ವ್ಯಕ್ತಿಯ ಪರ ಕೆಲಸ ಮಾಡುತ್ತಿದ್ದಾರೆ. ವ್ಯಕ್ತಿಗಿಂತ ಪಕ್ಷ ದೊಡ್ಡದು ಎನ್ನುವುದನ್ನು ಹಿರಿಯ ಮುಖಂಡರು ಅರ್ಥ ಮಾಡಿಕೊಳ್ಳಬೇಕು ಎಂದು ಸಂಗಮೇಶ ಕಂಬಾಳಿಮಠ ಹೇಳಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಗ್ಗಾಂವಿ ಉಪಚುನಾವಣೆಯಲ್ಲಿ ಗೆದ್ದ ಅಭ್ಯರ್ಥಿಗೆ ಶುಭಾಶಯ ಕೋರಿದ್ದಕ್ಕೆ ನನ್ನನ್ನು ಪಕ್ಷದಿಂದ ಉಚ್ಚಾಟಿಸಿದ್ದಾರೆ. ನನ್ನ ಹಾಗೆ ಸಂಸದ ಬಸವರಾಜ ಬೊಮ್ಮಾಯಿ, ಭರತ್ ಬೊಮ್ಮಾಯಿ ಸಹ ಶುಭಾಶಯ ತಿಳಿಸಿದ್ದಾರೆ. ಅವರನ್ನೇಕೆ ಪಕ್ಷದಿಂದ ಉಚ್ಚಾಟಿಸಿಲ್ಲ ಎಂದು ಧಾರವಾಡ ಕೆಸಿಸಿ ಬ್ಯಾಂಕಿನ ನಿರ್ದೇಶಕ ಸಂಗಮೇಶ ಕಂಬಾಳಿಮಠ ಪ್ರಶ್ನಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಸವರಾಜ ಬೊಮ್ಮಾಯಿ ಅವರು 2008ರಿಂದಲೂ ಪಕ್ಷ ವಿರೋಧಿ ಚಟುವಟಿಕೆ ನಡೆಸುತ್ತಿದ್ದಾರೆ. ಎಲ್ಲ ಚುನಾವಣೆಗಳಲ್ಲೂ ಪಕ್ಷದ ಅಭ್ಯರ್ಥಿ ಪರ ಕೆಲಸ ಮಾಡಿಲ್ಲ. ಮೊನ್ನೆ ನಡೆದ ಉಪಚುನಾವಣೆಯಲ್ಲಿ ಭರತ್ ಬೊಮ್ಮಾಯಿ ಸೋಲಿಗೂ ಅವರೇ ಕಾರಣ. ಆದರೂ ಪ್ರಾಮಾಣಿಕ ಕಾರ್ಯಕರ್ತರನ್ನು ಉಚ್ಚಾಟಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಶಿಗ್ಗಾಂವಿ ಕ್ಷೇತ್ರದ ಉಪಚುನಾವಣೆಯಲ್ಲಿ ಬಸವರಾಜ ಬೊಮ್ಮಾಯಿ ಅವರು ಕಾರ್ಯಕರ್ತರನ್ನು ಕಡೆಗಣಿಸಿದ್ದೇ ಸೋಲಿಗೆ ಕಾರಣವಾಯಿತು. ಕಾರ್ಯಕರ್ತರನ್ನು ಉಳಿಸಿ, ಪಕ್ಷವನ್ನು ಸಂಘಟಿಸುವ ಕೆಲಸವನ್ನು ಗದಗದಿಂದ ಆರಂಭಿಸಿದ್ದೇನೆ. ಬಸವರಾಜ ಬೊಮ್ಮಾಯಿ ನಡೆಯಿಂದ ಹಾವೇರಿ ಜಿಲ್ಲೆಯ 6 ವಿಧಾನಸಭಾ ಕ್ಷೇತ್ರಗಳು ಕಾಂಗ್ರೆಸ್ ಪಾಲಾಗಿವೆ. ಮುಂದಿನ ದಿನಗಳಲ್ಲಿ ಗದಗ ಜಿಲ್ಲೆಗೂ ಅಂಥದ್ದೇ ಪರಿಸ್ಥಿತಿ ಎದುರಾಗಲಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**ಖಾಸಗಿ ಲೇವಾದೇವಿಗಾರರು ಹೆಚ್ಚಿನ ಬಡ್ಡಿ ವಸೂಲು ಮಾಡಿದರೆ ಕಾನೂನು ಕ್ರಮ: ಡಿಸಿ ದಿವ್ಯ ಪ್ರಭು**

# ಸರಕಾರದ ನಿಯಮಗಳ ಪಾಲನೆಯಾಗಲಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಹಕಾರ ಇಲಾಖೆಯಿಂದ ಕರ್ನಾಟಕ ಲೇವಾದೇವಿಗಾರರ ಅಧಿನಿಯಮ 1961 ಹಾಗೂ ನಿಯಮಾವಳಿಗಳು 1965ರನ್ವಯ ನೋಂದಾಯಿತ ಆಗಿರುವ ಖಾಸಗಿ ಲೇವಾದೇವಿಗಾರರು ಹೆಚ್ಚಿನ ಬಡ್ಡಿ ವಸೂಲು ಮಾಡಿದರೆ ಅವರ ಲೈಸನ್ಸ್ ರದ್ದುಪಡಿಸಿ, ಅವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಎಚ್ಚರಿಸಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಜಿಲ್ಲೆಯ ಖಾಸಗಿ ಲೇವಾದೇವಿದಾರರು,



ಮೈಕ್ರೋ ಫೈನಾನ್ಸ್ ಮತ್ತು ಫೈನಾನ್ಸ್ ಸಂಸ್ಥೆಗಳ ಪ್ರಮುಖರು ಮತ್ತು ಸಹಕಾರಿ ಇಲಾಖೆ, ಲೀಡ್ ಬ್ಯಾಂಕ್ ಅಧಿಕಾರಿಗಳೊಂದಿಗೆ ಜಿಲ್ಲೆಯಲ್ಲಿ ಸಾಲದ ಹೆಸರಿನಲ್ಲಿ ಸಾರ್ವಜನಿಕರಿಗೆ ಕಿರಿಕಿರಿ, ತೊಂದರೆ ಆಗದಂತೆ ಕ್ರಮ ಕೈಗೊಳ್ಳುವ ಕುರಿತು ಸಭೆ ಜರುಗಿಸಿ ಮಾತನಾಡಿದರು.

ಆರ್ಥಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುವಾಗ ಸರಕಾರದ ನಿಯಮಗಳ ಪಾಲನೆ ಆಗಬೇಕು. ಸಾಲದ ಮೊತ್ತ, ಬಡ್ಡಿ, ಕಂಡಿಷನ್‌ಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ಆರ್ಥಿಕವಾಗಿ, ಸಾಮಾಜಿಕವಾಗಿ ಹಿಂದುಳಿದವರು ಸಾಲದ ಹೆಸರಿನಲ್ಲಿ ಶೋಷಣೆಗೆ ಒಳಗಾಗುವ ಸಾಧ್ಯತೆ ಹೆಚ್ಚಿರುತ್ತದೆ. ಈ ಕುರಿತು ಸಹಕಾರಿ ಇಲಾಖೆ ಮತ್ತು ಪೊಲೀಸ್ ಇಲಾಖೆ ನಿಗಾವಹಿಸಿ, ಅಂತಹ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಿದರು.

ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ ಮಾತನಾಡಿ, ಕಳೆದ ಒಂದು ವರ್ಷದಲ್ಲಿ ಅವಳಿ ನಗರದಲ್ಲಿ ಸಾಲ ಕೊಟ್ಟವರ ಕಿರಿಕಿರಿಯಿಂದ ತೊಂದರೆ ಅನುಭವಿಸುತ್ತಿರುವ ಕುರಿತು ಸುಮಾರು 31 ಪ್ರಕರಣಗಳು ದಾಖಲಾಗಿದ್ದು, ಈ ಸಂಬಂಧ 50 ಜನರನ್ನು ಬಂಧಿಸಲಾಗಿದೆ. ಲೈಸನ್ಸ್ ಪಡೆದು ವ್ಯವಹಾರ ಮಾಡುವವರ ಬಗ್ಗೆ ಮಾತ್ರ ನಿಗಾವಹಿಸದೇ ಲೈಸನ್ಸ್‌ದಾರರು ಅನಧಿಕೃತವಾಗಿ ಬಡ್ಡಿ ವ್ಯವಹಾರ ಮಾಡುವ ಮತ್ತು ಲೈಸನ್ಸ್ ಪಡೆಯದೆ ಸಾಲದ ವ್ಯವಹಾರ ನಡೆಸುವರ ಬಗ್ಗೆ ನಿಗಾವಹಿಸಿ, ಕಾನೂನಿಗೆ ಒಪ್ಪಿಸಬೇಕು ಎಂದರು.

ಸಹಕಾರ ಇಲಾಖೆ ಸಹಾಯಕ ನಿಬಂಧಕ ನಿಂಗರಾಜ ಬೆಣ್ಣಿ ಮಾತನಾಡಿ, ಎಲ್ಲ ಹಣಕಾಸು ಸಂಸ್ಥೆಗಳು ಭದ್ರತಾ ಸಾಲಕ್ಕೆ ವರ್ಷಕ್ಕೆ ಶೇ. 14ರಷ್ಟು, ಹಾಗೂ ಭದ್ರತೆ ಇಲ್ಲದ ಸಾಲಕ್ಕೆ ವರ್ಷಕ್ಕೆ ಶೇ.16ರಷ್ಟು ಬಡ್ಡಿಯನ್ನು ಮಾತ್ರ ಆಕರಣೆ ಮಾಡಬೇಕು. ಕರ್ನಾಟಕ ಲೇವಾದೇವಿಗಾರರ ನಿಯಮಾವಳಿಗಳು 1965ರ ನಿಯಮ 15 ರನ್ವಯ ಸಾಲದ ಷರತ್ತುಗಳ ವಿವರಗಳನ್ನು ತೋರಿಸುವ ವಿವರಣಾ ಪತ್ರವನ್ನು ಪ್ರತಿ ತಿಂಗಳು ನಮೂನೆ 6ರಲ್ಲಿ ಕಡ್ಡಾಯವಾಗಿ ಸಹಕಾರಿ ಇಲಾಖೆ ನಿಬಂಧಕರಿಗೆ ಸಲ್ಲಿಸಬೇಕು ಎಂದರು.

ಸಭೆಯಲ್ಲಿ ಲೀಡ್ ಬ್ಯಾಂಕ್ ಮ್ಯಾನೆಜರ್ ಪ್ರಭುದೇವ ಎನ್.ಜಿ., ಖಾಸಗಿ ಲೇವಾದೇವಿದಾರರು, ಮೈಕ್ರೋಫೈನಾನ್ಸ್ ಕಂಪನಿಗಳ ಪ್ರತಿನಿಧಿಗಳು, ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

> ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ್ ಮಾತನಾಡಿ, ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಸಾಲದ ಒತ್ತಡದಿಂದಾಗಿ ಎರಡು ಆತ್ಮಹತ್ಯೆ ಪ್ರಕರಣಗಳು ದಾಖಲಾಗಿದ್ದು, ಒಂದು ಪ್ರಕರಣದಲ್ಲಿ ಆತ್ಮಹತ್ಯಾ ಪ್ರಯತ್ನ ಮಾಡಲಾಗಿದೆ. ಸಾಲ ಕೊಡುವವರು ವಸೂಲಿಗೆ ಕಾಲಮಿತಿ ಇರಬೇಕು. ಸಾಲ ವಸೂಲು ಸಂದರ್ಭದಲ್ಲಿ ಮಹಿಳೆ, ಮಕ್ಕಳು, ವೃದ್ಧರು ಮತ್ತು ಗರ್ಭಿಣಿಯರ ಆರೋಗ್ಯದ ಬಗೆಗೂ ಕಾಳಜಿ ಇರಬೇಕು. ನ್ಯಾಯಾಲಯದ ಆದೇಶಗಳಾಗಿದ್ದರೂ ಅಲ್ಲಿನ ಪರಿಸ್ಥಿತಿಗೆ ಅನುಗುಣವಾಗಿ ಸ್ವಲ್ಪ ಸಮಯಾವಕಾಶ ನೀಡಿ, ಕ್ರಮವಹಿಸಬೇಕು ಎಂದರು.

## ಸಂಪಾದಕೀಯ

# ಜೆಡಿಎಸ್ ಮೇಲೆ ಮುಗಿಬಿದ್ದ ಕೈ

ಹಾಸನದಲ್ಲಿ ಕಾಂಗ್ರೆಸ್ ಸಮಾವೇಶ ನಡೆಸುವ ಮೂಲಕ ಮಾಜಿ ಪ್ರಧಾನಿ ದೇವೇಗೌಡರು ಮತ್ತು ಅವರ ಪಕ್ಷದ ವಿರುದ್ಧ ತೊಡೆ ತಟ್ಟುವ ಕೆಲಸ ಮಾಡಿದ್ದಾರೆ. ದೇವೇಗೌಡರ ರಾಜಕೀಯ ಶಕ್ತಿ ಕುಂದಿಸುವುದಕ್ಕಾಗಿಯೇ ಕಾಂಗ್ರೆಸ್ ಈ ಸಮಾವೇಶ ಹಮ್ಮಿಕೊಂಡಿತ್ತು. ಸಮಾವೇಶ ಯಶಸ್ವಿಯಾಗಿದ್ದು, ಅದರ ಪರಿಣಾಮಗಳು ಮುಂದಿನ ದಿನಗಳಲ್ಲಿಯೇ ಕಾಣಬೇಕು.

ಸದ್ಯದ ರಾಜ್ಯ ರಾಜಕಾರಣದಲ್ಲಿ ಕಾಂಗ್ರೆಸ್ ತಂತ್ರಗಾರಿಕೆ ಫಲ ನೀಡುತ್ತಿದ್ದು, ಸರಿಯಾದ ಸಮಯದಲ್ಲಿ ಸಮಾವೇಶ ನಡೆಸಿ, ಜೆಡಿಎಸ್ ಕೋಟೆಯನ್ನು ಈಗಲೇ ಛಿದ್ರ ಮಾಡುವ ಯೋಜನೆ ಹಾಕಿಕೊಂಡಂತಾಗಿದೆ. ಭವಿಷ್ಯದ ದಿನಗಳಲ್ಲಿ ಪ್ರೀತಂಗೌಡ ಸಹಿತ ಇನ್ನಿತರ ನಾಯಕರನ್ನು ಕಾಂಗ್ರೆಸ್ ನತ್ತ ಸೆಳೆದು, ದೇವೇಗೌಡರನ್ನು ರಾಜಕೀಯವಾಗಿ ತೆರೆ ಮರೆಗೆ ಸರಿಸುವ ಪ್ರಯತ್ನವನ್ನು ಆರಂಭಿಸಿದೆ.

ಪ್ರತಿಪಕ್ಷ ಬಿಜೆಪಿ ನಾಯಕರು ಸದ್ಯ ಆಂತರಿಕ ಕಚ್ಚಾಟದಲ್ಲಿ ತೊಡಗಿದ್ದಾರೆ. ಅದರಲ್ಲೂ ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಬಿಜೆಪಿಗೆ ಬಿಸಿ ತುಪ್ಪವಾಗಿ ಬದಲಾಗಿದ್ದು, ಬಿಜೆಪಿ ನಾಯಕರು ಯತ್ನಾಳ ಹೊರತಾಗಿ ಬೇರೆ ಯಾರ ಬಗ್ಗೆಯೂ ಮಾತನಾಡುವ ಸ್ಥಿತಿಯಲ್ಲಿಲ್ಲ. ಮುಡಾ, ವಾಲ್ಮೀಕಿ ಹಗರಣದ, ವಕ್ಫ್ ವಿಚಾರ ಎಷ್ಟು ವೇಗವಾಗಿ ಮುನ್ನಲೆಗೆ ಬಂದವೋ ಅಷ್ಟೆ ವೇಗವಾಗಿ ತೆರೆಮರೆಗೆ ಸರಿದು ಹೋದರೂ ಬಿಜೆಪಿ ನಾಯಕರು ಆ ಬಗ್ಗೆ ಎಳ್ಳಷ್ಟು ಮಾತನಾಡುತ್ತಿಲ್ಲ.

ಇಂಥ ಸಂದರ್ಭದಲ್ಲಿ ಕಾಂಗ್ರೆಸ್ಸಿಗರು ಜೆಡಿಎಸ್ ನಾಯಕರ ವಿರುದ್ಧ ಮಾಡುವ ಆರೋಪಗಳಿಗೆ ಪ್ರತಿಕ್ರಿಯಿಸುವುದು, ವಿರೋಧಿಸಲು ಸಾಧ್ಯವೇ ಇಲ್ಲ. ಆಂತರಿಕವಾಗಿ ರಾಜ್ಯ ಬಿಜೆಪಿ ನಾಯಕರಿಗೆ ಜೆಡಿಎಸ್ ಸಾಂಗತ್ಯ ಬೇಕಾಗಿಲ್ಲ. ಆದರೆ ಹೈಕಮಾಂಡ್ ಮೈತ್ರಿ ನಿರ್ಧಾರ ಮಾಡಿದ್ದರಿಂದ ಒಲ್ಲದ ಮನಸ್ಸಿನಿಂದಲೇ ಜೆಡಿಎಸ್ ಜೊತೆಗೂಡಿ ಕೆಲಸ ಮಾಡುತ್ತಿದ್ದಾರೆ. ಆದರೆ ಕಾಂಗ್ರೆಸ್ ಈಗ ನಡೆಸಿರುವ ಸಮಾವೇಶದಿಂದ ಬಿಜೆಪಿ ನಾಯಕರೂ ಒಳಗಿಂದೊಳಗೆ ಸಂತೋಷ ಪಡುತ್ತಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಒಗ್ಗಟ್ಟಿನ ಮಂತ್ರದೊಂದಿಗೆ ಮುನ್ನಡೆದು, ಜೆಡಿಎಸ್ ಗುರಿಯಾಗಿಸಿಕೊಂಡು ಮಾಡುತ್ತಿರುವ ಆರೋಪಗಳು ಭವಿಷ್ಯದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಮೇಲೆ ಪರಿಣಾಮ ಉಂಟು ಮಾಡುವ ಹುನ್ನಾರ ಅಡಗಿದೆ. ಭವಿಷ್ಯದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಮುರಿದುಬಿದ್ದು, ಅದರ ಲಾಭ ಮಾಡಿಕೊಳ್ಳುವ ಕಾಂಗ್ರೆಸ್ ಇರಾದೆಗೆ ಹಾಸನದಲ್ಲಿ ಬೀಜ ಬಿತ್ತಿದಂತಾಗಿದೆ

## ಆಂಧ್ರಪ್ರದೇಶ: ವಕ್ಫ್ ಮಂಡಳಿಯನ್ನು ಪುನರ್ ರಚಿಸಿದ ಚಂದ್ರಬಾಬು ನಾಯ್ಡು ಸರ್ಕಾರ



■ ವಿಜಯಸಾಕ್ಷಿ ಸುದ್ದಿ, ವಿಶಾಖಪಟ್ಟಣ

ಹಿಂದಿನ ಮಂಡಳಿಯನ್ನು ವಿಸರ್ಜಿಸಿ ಒಂದು ವಾರದ ನಂತರ ಆಂಧ್ರ ಪ್ರದೇಶ ಸರ್ಕಾರವು ಶುಕ್ರವಾರ ಎಂಟು ಸದಸ್ಯರ ನೇಮಕದೊಂದಿಗೆ ರಾಜ್ಯ ವಕ್ಫ್ ಮಂಡಳಿಯನ್ನು ಪುನರ್ ರಚಿಸಿತು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಸೆಕ್ಷನ್ 14 ರ ಉಪ-ವಿಭಾಗ (9) ಮತ್ತು 1995 ರ ವಕ್ಫ್ ಕಾಯಿದೆಯ ಸೆಕ್ಷನ್ 21 ರ ಅಡಿಯಲ್ಲಿ ಎಂಟು ಸದಸ್ಯರನ್ನು ನೇಮಕ ಮಾಡುವ ಸರ್ಕಾರಿ ಆದೇಶವನ್ನು (ಜಿಒ) ಹೊರಡಿಸಿದೆ.

ಚುನಾಯಿತ ಸದಸ್ಯರ ವರ್ಗದ ಅಡಿಯಲ್ಲಿ, ಸರ್ಕಾರವು ವಿಧಾನ ಪರಿಷತ್ ಸದಸ್ಯರಾದ ಎಂಡಿ ರುಹುಲ್ಲಾ ಮತ್ತು ಮುತವಲ್ಲಿ ಶೇಕ್ ಖಾಜಾ ಅವರನ್ನು ನೇಮಿಸಿತು. ಟಿಡಿಪಿ ನಾಯಕ ಅಬ್ದುಲ್ ಅಜೀಜ್, ಶಿಯಾ ವಿದ್ವಾಂಸ ಹಾಜಿ ಮುಕರಮ್ ಹುಸೇನ್ ಮತ್ತು ಸುನ್ನಿ ವಿದ್ವಾಂಸ ಮೊಹಮ್ಮದ್ ಇಸ್ಮಾಯಿಲ್ ಬೇಗ್ ಅವರನ್ನೂ ಸರ್ಕಾರ ನಾಮನಿರ್ದೇಶನ ಮಾಡಿದೆ.

ಸೆಕ್ಷನ್ 14 (3) ಅನ್ನು ಅನ್ವಯಿಸುವ ಮೂಲಕ ಇತರ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡಲಾಗಿದೆ. ಅವರೆಂದರೆ ಶಾಸಕ ಮೊಹಮ್ಮದ್ ನಸೀರ್, ಸೈಯದ್ ದಾವೂದ್ ಬಾಷಾ ಬಾಖವಿ ಮತ್ತು ಶೇಕ್ ಅಕ್ರಮ್. ಜಿಒ ಪ್ರಕಾರ, ಸದಸ್ಯರಲ್ಲಿ ಒಬ್ಬರು ಮಂಡಳಿಯ ಅಧ್ಯಕ್ಷರಾಗಿ ಆಯ್ಕೆಯಾಗುತ್ತಾರೆ.

ತೆಲುಗು ದೇಶಂ ಪಕ್ಷ (ಟಿಡಿಪಿ) ಈಗಾಗಲೇ ಅಬ್ದುಲ್ ಅಜೀಜ್ ಅವರನ್ನು ವಕ್ಫ್ ಮಂಡಳಿಯ ಅಧ್ಯಕ್ಷರನ್ನಾಗಿ ಘೋಷಿಸಿರುವುದರಿಂದ, ಶೀಘ್ರದಲ್ಲೇ ಕರೆಯಲಾಗುವ ಸಭೆಯಲ್ಲಿ ಸದಸ್ಯರು ಅವರನ್ನು ಅಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡುವ ಸಾಧ್ಯತೆಯಿದೆ. ಟಿಡಿಪಿ ನೇತೃತ್ವದ ಎನ್‌ಡಿಎ ಸರ್ಕಾರವು ಹಿಂದಿನ ವೈಎಸ್‌ಆರ್ ಕಾಂಗ್ರೆಸ್ ಪಕ್ಷದ ಸರ್ಕಾರವು ಕಳೆದ ವರ್ಷ ಸ್ಥಾಪಿಸಿದ ಹಿಂದಿನ ಮಂಡಳಿಯನ್ನು ವಿಸರ್ಜಿಸಿ ಒಂದು ವಾರದ ನಂತರ ವಕ್ಫ್ ಬೋರ್ಡ್ ಅನ್ನು ಮರುರಚಿಸಿತು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಕಳೆದ ವರ್ಷ ಅಕ್ಟೋಬರ್‌ನಲ್ಲಿ ವಕ್ಫ್ ಬೋರ್ಡ್ ರಚಿಸಿ ಹೊರಡಿಸಿದ್ದ ಜಿಒ ಹಿಂಪಡೆದು ನವೆಂಬರ್ 30 ರಂದು ಜಿಒ ಹೊರಡಿಸಿದೆ.

## ಹರಿಯಾಣ | ರೈತರ ಮೇಲೆ ಅಶ್ರುವಾಯು ದಾಳಿ; ಇಂಟರ್‌ನೆಟ್ ಬಂದ್; ಸೆಕ್ಷನ್ ಜಾರಿ

■ ವಿಜಯಸಾಕ್ಷಿ ಸುದ್ದಿ, ಚಂಡೀಗಢ

ಹರಿಯಾಣದ ಅಂಬಾಲಾ ಬಳಿಯ ಶಂಭು ಗಡಿಯಲ್ಲಿ ಒಂಬತ್ತು ತಿಂಗಳಿನಿಂದ ಪ್ರತಿಭಟನೆ ನಡೆಸುತ್ತಾ ಬಿಡಾರ ಹೂಡಿದ್ದ ರೈತರ ಮೇಲೆ ಹರಿಯಾಣ ಪೊಲೀಸರು ಶುಕ್ರವಾರ ಅಶ್ರುವಾಯು ಶೆಲ್‌ಗಳನ್ನು ಹಾರಿಸಿದ್ದಾರೆ ಎಂದು ವರದಿಯಾಗಿದೆ. ಪ್ರತಿಭಟನೆಯನ್ನು ಪುನರಾರಂಭಿಸಿರುವ ರೈತರು ದೆಹಲಿಯತ್ತ ಮೆರವಣಿಗೆ ನಡೆಸಲು ಪ್ರಯತ್ನಿಸುತ್ತಿರುವಾಗ ಬ್ಯಾರಿಕೇಡ್‌ಗಳನ್ನು ಮುರಿದಿದ್ದಾರೆ.

ಪ್ರತಿಭಟನಾ ನಿರತ ರೈತರು ಮುಖ್ಯವಾಗಿ ಬೆಳೆಗಳಿಗೆ ಎಂಎಸ್‌ಪಿಗೆ ಕಾನೂನು ಖಾತರಿಯನ್ನು ಬಯಸುತ್ತಿದ್ದಾರೆ. ಈ ಹಿಂದೆ ರೈತರು ಫೆಬ್ರವರಿ 13 ಮತ್ತು ಫೆಬ್ರವರಿ 21 ರಂದು ದೆಹಲಿ ಕಡೆಗೆ ಮೆರವಣಿಗೆ ನಡೆಸಲು ಪ್ರಯತ್ನಿಸಿದ್ದರು. ಆದಾಗ್ಯೂ, ಪಂಜಾಬ್-ಹರಿಯಾಣ ಗಡಿಯಲ್ಲಿರುವ ಶಂಭು ಮತ್ತು ಖಾನೌರಿಯಲ್ಲಿ ಅವರನ್ನು ಭದ್ರತಾ ಪಡೆಗಳು ತಡೆದವು. ರೈತರು, ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ) ಮತ್ತು ಕಿಸಾನ್ ಮಜ್ದೂರ್ ಮೋರ್ಚಾದ ಅಡಿಯಲ್ಲಿ, ಶಂಭು ಮತ್ತು ಖಾನೌರಿ ಗಡಿ ಬಿಂದುಗಳಲ್ಲಿ ಮೊಕ್ಕಾಂ ಹೂಡಿದ್ದಾರೆ.


### ಸುಕ್ಷೇತ್ರ ಸಿದ್ದನಕೊಳ್ಳದಲ್ಲಿ 'ಸಿದ್ಧಶ್ರೀ ರಾಷ್ಟ್ರೀಯ ಉತ್ಸವ-2025' ಜನವರಿ 14, 15ಕ್ಕೆ

# ಚಲನಚಿತ್ರೋತ್ಸವಕ್ಕೆ ಚಲನಚಿತ್ರಗಳ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಬಾಗಲಕೋಟ

ಇಲ್ಲಿನ ಐಹೊಳೆ ಹತ್ತಿರದ ಉತ್ತರ ಕರ್ನಾಟಕದ ಹೆಮ್ಮೆಯ ಕಲಾಪೋಷಕರ ಮಠ, ಸುಕ್ಷೇತ್ರ ಸಿದ್ಧನಕೊಳ್ಳದ 'ಸಿದ್ಧಶ್ರೀ ರಾಷ್ಟ್ರೀಯ ಉತ್ಸವ-2025' ಜನವರಿ 14, 15ರಂದು ಜರುಗಲಿದ್ದು, ಜ.14ರಂದು ರಾಷ್ಟ್ರೀಯ ಪ್ರಶಸ್ತಿ ಪುರಸ್ಕಾರ, ಜ.15 ರಂದು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ನಡೆಯಲಿದೆ ಎಂದು ಧರ್ಮಾಧಿಕಾರಿಗಳಾದ ಡಾ.ಶಿವಕುಮಾರ ಸ್ವಾಮೀಜಿ ತಿಳಿಸಿದ್ದಾರೆ.

ಸಿದ್ಧಶ್ರೀ ಉತ್ಸವದಲ್ಲಿ ಸಹಸ್ರಾರು ಭಕ್ತರು ಸೇರುತ್ತಿದ್ದು, ಸಂಗೀತ, ನೃತ್ಯ ಸಾಂಸ್ಕೃತಿಕ ಮನರಂಜನಾ ಕಾರ್ಯಕ್ರಮಗಳು ನೆರವೇರುತ್ತವೆ. ರಾಜ್ಯ, ಹೊರರಾಜ್ಯಗಳ ವಿವಿಧ ಸಾಧಕರು, ಪ್ರತಿಭಾನ್ವಿತ ಉದಯೋನ್ಮುಖ ಕಲಾ ಪ್ರತಿಭೆಗಳಿಗೂ ವೇದಿಕೆ ನೀಡಿ ಪ್ರೋತ್ಸಾಹಿಸಲಾಗುತ್ತಿದೆ. ಪ್ರತಿವರ್ಷದಂತೆ ಈ ವರ್ಷವೂ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಹಮ್ಮಿಕೊಳ್ಳಲಾಗಿದೆ. ಚಿತ್ರೋತ್ಸವದ ಆಯ್ಕೆ ಸಮಿತಿಯನ್ನು ಈಗಾಗಲೇ ರಚಿಸಲಾಗಿದೆ. ಚಲನಚಿತ್ರ ಪತ್ರಕರ್ತರಾದ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ, ಜೂನಿಯರ್ ಉಪೇಂದ್ರ ವೀರೇಶ ಪುರವಂತ, ಚಲನಚಿತ್ರ ಕಲಾವಿದ ಸಂಗನಗೌಡ್ರು ಕುರುಡಗಿ, ಚಲನಚಿತ್ರ ಛಾಯಾಗ್ರಾಹಕ ಶಿವಶರಣ ಸುಗ್ನಳ್ಳಿ, ಚಲನಚಿತ್ರ ನಿರ್ದೇಶಕ ಅರವಿಂದ



ಮುಳಗುಂದ, ಚಲನಚಿತ್ರ ನಿರ್ದೇಶಕ, ನಿರ್ಮಾಪಕ ಲೋಕೇಶ ವಿದ್ಯಾಧರ, ಚಲನಚಿತ್ರ ಮತ್ತು ಕಿರುತೆರೆ ಕಲಾವಿದೆ ಸುನಂದಾ ಕಲ್ಬುರ್ಗಿ, ಭರತನಾಟ್ಯ ಕಲಾವಿದೆ ಕೃತ್ತಿಕಾ ಕಾರ್ಯ ನಿರ್ವಹಿಸಲಿದ್ದಾರೆ.

ಆಸಕ್ತರು ಡಿಸೆಂಬರ್ 31ರೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ನಂತರ ಬಂದವರಿಗೆ ಅವಕಾಶವಿಲ್ಲ. ಶ್ರೀಗಳ ಮತ್ತು ಆಯ್ಕೆ ಸಮಿತಿ ತೀರ್ಮಾನವೇ ಅಂತಿಮ. ಆಯ್ಕೆಯಾದವರಿಗೆ ನಂತರ ತಿಳಿಸಲಾಗುತ್ತದೆ. ತಮ್ಮ ಟೀಸರ್, ಟ್ರೇಲರ್, ಪೋಸ್ಟರ್‌ಗಳನ್ನು ಡಾ.ಪ್ರಭು ಗಂಜಿಹಾಳ, ವಾಟ್ಸಪ್ ನಂ-9448775346 ಇಲ್ಲಿಗೆ ಕಳಿಸಬೇಕು. ಹೆಚ್ಚಿನ ಮಾಹಿತಿಗಾಗಿ ಚಲನಚಿತ್ರೋತ್ಸವ ವಿಭಾಗದ ಡಾ.ವೀರೇಶ ಹಂಡಿಗಿ-ಮೊ.9060933596, ವೀರೇಶ ಐಹೊಳೆ-ಮೊ.7026062364, ಸಂಗನಗೌಡ್ರು ಕುರುಡಗಿ-ಮೊ.8861811128 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಶ್ರೀಗಳು ತಿಳಿಸಿದ್ದಾರೆ.

ನಿರ್ಮಾಪಕರು, ನಿರ್ದೇಶಕರು, ಕಲಾವಿದರು ಇನ್ನೂ ಬಿಡುಗಡೆಯಾಗದ 2024ರಲ್ಲಿ ನಿರ್ಮಾಣವಾದ, ಆಗುತ್ತಿರುವ ಹೊಸ ಚಲನಚಿತ್ರಗಳ, ಟೆಲಿಫಿಲ್ಮ್, ಕಿರುಚಿತ್ರಗಳ, ಟ್ರೈಲರ್, ಟೀಸರ್ ಮತ್ತು ಪೋಸ್ಟರಗಳನ್ನು ಚಿತ್ರೋತ್ಸವದಲ್ಲಿ ಬಿಡುಗಡೆ ಮಾಡಬಹುದು. ಯಾವುದೇ ಪ್ರವೇಶ ಶುಲ್ಕಗಳಿಲ್ಲದೆ ಉಚಿತ ಅವಕಾಶ ಕಲ್ಪಿಸಲಾಗಿದೆ. ಭಾಗವಹಿಸಿದ ಚಲನಚಿತ್ರದ ತಂಡಗಳಿಗೆ ಅಭಿನಂದನಾ ಪತ್ರ, ನೆನಪಿನ ಸ್ಮರಣಿಕೆ, ಕಿರುಚಿತ್ರ ತಂಡಗಳಿಗೆ ಅಭಿನಂದನಾ ಪತ್ರಗಳನ್ನು ನೀಡಲಾಗುತ್ತದೆ.

## ಡಾ.ಬಿ.ಆರ್.ಅಂಬೇಡ್ಕರ್ ಅವರ 68ನೇ ಮಹಾಪರಿನಿರ್ವಾಣ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 68ನೇ ಮಹಾಪರಿನಿರ್ವಾಣ ದಿನಾಚರಣೆ ನಿಮಿತ್ತ ಶುಕ್ರವಾರ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು, ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಹಿಂದುಳಿದ



ವರ್ಗ/ ಅಲ್ಪಸಂಖ್ಯಾತ ವರ್ಗಗಳ ಸಮಾಜ ಮುಖಂಡರು, ಸರ್ವಸದಸ್ಯರು, ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಹಾಜರಿದ್ದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಸರ್ವರನ್ನು ಸ್ವಾಗತಿಸಿ ವಂದಿಸಿದರು. ಇದಕ್ಕೂ ಮುನ್ನ ಗದಗ ಬೆಟಗೇರಿ ನಗರಸಭೆಯ ಆವರಣದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಅವರ ಮೂರ್ತಿಗೆ ಮಾಲಾರ್ಪಣೆ ಕಾರ್ಯಕ್ರಮ ಜರುಗಿತು.

## ಶಿಂಧೆ ಹಠ ಹಿಡಿದಿದ್ದರೆ, ಬಿಜೆಪಿ ಅವರನ್ನು ಬಿಟ್ಟು ಮುಂದೆ ಸಾಗುತ್ತಿತ್ತು - ಸಂಜಯ್ ರಾವತ್



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮಹಾರಾಷ್ಟ್ರದ ಉಪ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿರುವ ಏಕನಾಥ್ ಶಿಂಧೆ ಅವರು ಬಿಜೆಪಿ ಜೊತೆಗೆ 'ಹಠಮಾರಿ' ಧೋರಣೆ ಮುಂದುವರೆಸಿದ್ದರೆ, ಹೊಸ ಸರ್ಕಾರದ ಪ್ರಮಾಣ ವಚನದಲ್ಲಿ ಅವರು ಇಲ್ಲದೆ ಮುಂದುವರೆಯಲು ಬಿಜೆಪಿಯ ವರಿಷ್ಠರು ಯೋಜಿಸಿದ್ದರು ಎಂದು ಶಿವಸೇನಾ (ಯುಬಿಟಿ) ನಾಯಕ ಸಂಜಯ್ ರಾವುತ್ ಶುಕ್ರವಾರ ಹೇಳಿದ್ದಾರೆ.

ಹೊಸದಿಲ್ಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಂಜಯ್ ರಾವತ್, ಮಹಾಯುತಿಗೆ ಭಾರಿ ಬಹುಮತ ಬಂದರೂ ರಾಜ್ಯ ಸರಕಾರಕ್ಕೆ ಇದುವರೆಗೂ ಪೂರ್ಣ ಪ್ರಮಾಣದ ಸಚಿವ ಸಂಪುಟ ಇಲ್ಲದೇ ಇರುವುದು ಮೈತ್ರಿಕೂಟದಲ್ಲಿ ಎಲ್ಲವೂ ಸರಿಯಾಗಿಲ್ಲ ಎಂಬುದನ್ನು ಸೂಚಿಸುತ್ತದೆ ಎಂದು ಪ್ರತಿಪಾದಿಸಿದ್ದಾರೆ. ಮಹಾರಾಷ್ಟ್ರದಲ್ಲಿ ಭಾರಿ ಜನಾದೇಶದ ಹೊರತಾಗಿಯೂ ಬಿಜೆಪಿ ಸರ್ಕಾರ ರಚಿಸಲು 15 ದಿನಗಳನ್ನು ತೆಗೆದುಕೊಂಡಿದೆ ಎಂದು ಅವರು ಹೇಳಿದ್ದಾರೆ.

"ಏಕನಾಥ್ ಶಿಂಧೆ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಬೇಕಿತ್ತು. ಏಕನಾಥ್ ಶಿಂಧೆ ಇಲ್ಲದೆಯೇ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಬಿಜೆಪಿ ಮುಂದಾಗಿತ್ತು. ಬಿಜೆಪಿ ಮೇಲೆ ಒತ್ತಡ ಹೇರುವ ಹಠಮಾರಿ ಧೋರಣೆ ತಾಳಿದ್ದರೆ, ಅವರು ಇಲ್ಲದೆ ಮುಂದುವರೆಯುವಂತೆ ರಾಜ್ಯ ಬಿಜೆಪಿ ನಾಯಕತ್ವಕ್ಕೆ ಪಕ್ಷದ ವರಿಷ್ಠರು ತಿಳಿಸಿದ್ದರು." ಎಂದು ರಾವತ್ ಹೇಳಿಕೊಂಡಿದ್ದಾರೆ.

ಮುಂಬೈನ ಆಜಾದ್ ಮೈದಾನದಲ್ಲಿ ಗುರುವಾರ ಸಂಜೆ ನಡೆದ ಅದ್ಧೂರಿ ಸಮಾರಂಭದಲ್ಲಿ ಬಿಜೆಪಿ ನಾಯಕ ದೇವೇಂದ್ರ ಫಡ್ನವೀಸ್ ಮೂರನೇ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಮಾಜಿ ಮುಖ್ಯಮಂತ್ರಿ ಏಕಾಂತ್ ಶಿಂಧೆ ಮತ್ತು ಅಜಿತ್ ಪವಾರ್ ಉಪಮುಖ್ಯಮಂತ್ರಿಗಳಾಗಿ ಪ್ರಮಾಣ ವಚನ ಸ್ವೀಕರಿಸಿದ್ದರು. ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರು ಮತ್ತು ಎನ್‌ಡಿಎ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಿದ್ದರು.

ಏಕನಾಥ್ ಶಿಂಧೆಗೆ ಉಪ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಲು ಇಷ್ಟವಿರಲಿಲ್ಲ, ಆದರೆ ಬಿಜೆಪಿ ಮತ್ತು ಅವರ ಪಕ್ಷದ ಶಾಸಕರ ಒತ್ತಾಯದ ನಂತರ ಅವರು ಸರ್ಕಾರದಲ್ಲಿ ಉಪ ಮುಖ್ಯಮಂತ್ರಿಯಾಗಿ ಸೇರಿದ್ದರು. ಹೊಸ ಸರ್ಕಾರದ ಭಾಗವಾಗುತ್ತೇನೋ ಇಲ್ಲವೋ ಎಂಬ ಬಗ್ಗೆ ಅವರು ಮೌನ ತಾಳಿದ್ದರು. ಪ್ರಮಾಣವಚನ ಸಮಾರಂಭಕ್ಕೆ ಕೆಲವೇ ಗಂಟೆಗಳ ಮೊದಲು ಶಿವಸೇನೆಯ ಶಾಸಕರೊಬ್ಬರು ಶಿಂಧೆ ಉಪ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ಖಚಿತಪಡಿಸಿದ್ದರು. ಕೇಂದ್ರೀಯ ಸಂಸ್ಥೆಗಳನ್ನು ಬಳಸಿಕೊಂಡು ಬಿಜೆಪಿ ರಾಜ್ಯದಲ್ಲಿ ಸೇಡಿನ ರಾಜಕಾರಣ ಮಾಡುತ್ತಿದೆ ಎಂದು ರಾವತ್ ಆರೋಪಿಸಿದ್ದಾರೆ.


## ಮಾನವ ಸಂಪನ್ಮೂಲವಿಲ್ಲದೆ ಅಭಿವೃದ್ಧಿ ಅಸಾಧ್ಯ: ಹನುಮಂತಗೌಡ ಎಂ.ಗುಡಿಹಿಂದಿನ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಯಾವುದೇ ಸಂಘ-ಸಂಸ್ಥೆ, ವ್ಯಾಪಾರವಾಗಲೀ ಮಾನವ ಸಂಪನ್ಮೂಲ ಇಲ್ಲದೇ ಅಭಿವೃದ್ಧಿ ಅಸಾಧ್ಯ ಎಂದು ಯಲಬುರ್ಗಾದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ವಿಭಾಗದ ಸಹಪ್ರಾಧ್ಯಾಪಕ ಹನುಮಂತಗೌಡ ಎಂ.ಗ'ಂಡಿಹಿಂದಿನ' ಅಭಿಪ್ರಾಯಪಟ್ಟರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ವಿಭಾಗದಿಂದ ಆಂತರಿಕ ಗುಣಮಟ್ಟ ಭರವಸೆ ಕೋಶದ ಆಶ್ರಯದಲ್ಲಿ ಗುರುವಾರ ನಡೆದ ಆರ್ಥಿಕಾಭಿವೃದ್ಧಿಯಲ್ಲಿ ಮಾನವ ಸಂಪನ್ಮೂಲ ನಿರ್ವಹಣೆಯ ಪಾತ್ರ ಎಂಬ ವಿಷಯ ಕುರಿತು ಅವರು ವಿಶೇಷ ಉಪನ್ಯಾಸ ನೀಡಿದರು.

ಅಭಿವೃದ್ಧಿ ವಿಷಯದಲ್ಲಿ ಮಾನವ ಸಂಪನ್ಮೂಲ ನಿರ್ವಹಣೆಯ ಪಾತ್ರ ದೊಡ್ಡದು.




ಸಂಘಸಂಸ್ಥೆ, ವಾಣಿಜ್ಯ-ವ್ಯಾಪಾರದಲ್ಲಿ ಮಾನವ ಸಂಪನ್ಮೂಲದ ಕೊರತೆ ಕಂಡು ಬಂದರೆ ಅಭಿವೃದ್ಧಿಯ ಪಥ ಸುಲಭಕ್ಕೆ ಸಿಗದು ಎಂದು ಅವರು ಪ್ರತಿಪಾದಿಸಿದರು.

ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾ೦ಌಕ ಅಧ್ಯಕ್ಷತೆ ವಹಿಸಿದ್ದರು. ಆಂತರಿಕ ಗುಣಮಟ್ಟ ಭರವಸೆ ಕೋಶದ ಸಂಯೋಜಕರು, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಟಿ.ವಿ.ವಾರುಣಿ ಪ್ರಾಸ್ತಾವಿಕ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಸಹಾಯಕ ಪ್ರಾಧ್ಯಾಪಕ ವೈ.ಬಿ.ಅಂಗಡಿ, ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಸಂತೋಷಿಕುಮಾರಿ ಪಾಲ್ಗೊಂಡು ಮಾತನಾಡಿದರು. ಡಾ.ಗಿರಿಜಾ ತುರುಮುರಿ ನಿರೂಪಿಸಿದರು. ಅಮರೇಶ್ ಡೊಳ್ಳಿನ್ ಸ್ವಾಗತಿಸಿದರು. ಡಾ.ಜಾತಪ್ಪ.ಜೆ ಸಂಪನ್ಮೂಲ ವ್ಯಕ್ತಿ ಪರಿಚಯ ಮಾಡಿಕೊಟ್ಟರು. ಈರಪ್ಪ ಮಂಗಳಾಪುರ ವಂದಿಸಿದರು. ಡಾ.ಸಣ್ಣದೇವೇಂದ್ರಸ್ವಾಮಿ, ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

### 'ಈ ಪಾದ ಪುಣ್ಯ ಪಾದ' ಚಲನಚಿತ್ರ ಪೋಸ್ಟರ್ ಬಿಡುಗಡೆ

# ಭಿನ್ನ ಧಾಟಿಯ ಸಿನಿಮಾ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಿನ್ನ ಕಥಾನಕಗಳಿಗೆ ಪರಿಣಾಮಕಾರಿಯಾಗಿ ದೃಶ್ಯ ರೂಪ ಕೊಡುವ ಮೂಲಕ ಗಮನ ಸೆಳೆದಿರುವ ಸಿದ್ದು ಪೂರ್ಣಚಂದ್ರ. ದಾರಿ ಯಾವುದಯ್ಯಾ ವೈಕುಂಠಕ್ಕೆ, ಬ್ರಹ್ಮಕಮಲ, ತಾರಿಣಿ ಸೇರಿದಂತೆ ಒಂದಷ್ಟು ಭಿನ್ನ ಧಾಟಿಯ ಸಿನಿಮಾಗಳೊಂದಿಗೆ ಪ್ರತಿಭಾನ್ವಿತ ನಿರ್ದೇಶಕರೆಂದು ಗುರುತಿಸಿಕೊಂಡಿದ್ದಾರೆ. ಇದೀಗ 'ಈ ಪಾದ ಪುಣ್ಯ ಪಾದ' ಎಂಬ ಚಿತ್ರವನ್ನು ನಿರ್ದೇಶಿಸಿದ್ದು, ಇದರ ಮೊದಲ ಪೋಸ್ಟರ್ ರೋ-ರಿಂಗ್ ಸ್ಟಾರ್ ಶ್ರೀಮುರುಳಿ ಬಿಡುಗಡೆಗೊಳಿಸಿ, ಚಿತ್ರತಂಡಕ್ಕೆ ಶುಭ ಕೋರಿದರು.

ನಿರ್ದೇಶಕ ಸಿದ್ದು ಪೂರ್ಣಚಂದ್ರ ಇಲ್ಲಿ ಆಪ್ತ ಕಥೆಯೊಂದನ್ನು ದೃಶ್ಯಕ್ಕೆ ಒಗ್ಗಿಸಿದ್ದಾರೆ. ಆನೆಕಾಲು ರೋಗಿಯೊಬ್ಬನ ಸುತ್ತ ಚಲಿಸುವ ಕಥೆಯನ್ನೊಳಗೊಂಡಿರುವ ಸಿನಿಮಾ ಇದು. ಸಾಮಾನ್ಯವಾಗಿ ಯಾವುದೇ




ಖಾಯಿಲೆ ಕಸಾಲೆಗಳು ಆವರಿಸಿಕೊಂಡಾಗಲೂ, ಅದು ದೈಹಿಕವಾಗಿ ಬಾಧಿಸುವುದಕ್ಕಿಂತ ಹೆಚ್ಚಾಗಿ ಮಾನಸಿಕವಾಗಿ ಕೊಲ್ಲುತ್ತದೆ. ಅದೆಂಥಾ ಕಾಯಿಲೆ ಬಂದರೂ ಎದೆಗುಂದದೆ ಎದುರಿಸಬೇಕು, ಎಲ್ಲದಕ್ಕೂ ಸೆಡ್ಡು ಹೊಡೆದು ಬದುಕಬೇಕೆಂಬ ಸ್ಫೂರ್ತಿದಾಯಕ ಆಶಯ ಈ ಸಿನಿಮಾದ ಆತ್ಮವಾಗಿದೆ. ಹಲವು ವರ್ಷಗಳ ಕಾಲ ಅಧ್ಯಯನ ನಡೆಸಿ, ಅದನ್ನು ಕಥೆಯೊಂದರ ಚೌಕಟ್ಟಿಗೆ ಒಗ್ಗಿಸಿ ದೃಶ್ಯರೂಪ ನೀಡಿದ್ದಾರೆ.

ರಾಜು ಹೆಮ್ಮಿಗೆಪುರ ಛಾಯಾಗ್ರಹಣ, ಚಿತ್ರಕ್ಕೆ ಸಂಗೀತ ಮತ್ತು ಹಿನ್ನೆಲೆ ಸಂಗೀತವನ್ನು ಅನಂತ ಆರ್ಯನ್, ಕಲೆ ಬಸವರಾಜ್ ಆಚಾರ್, ವಸ್ತ್ರಾಲಂಕಾರ ನಾಗರತ್ನ ಕೆ.ಎಚ್, ಶಬ್ದ ವಿನ್ಯಾಸ ಶ್ರೀರಾಮ್, ಕಲರಿಂಗ್ ಗಗನ್ ಆರ್, ಸಂಕಲನ ದೀಪು ಸಿ.ಎಸ್, ಪತ್ರಿಕಾ ಸಂಪರ್ಕ ಸುಧೀಂದ್ರ ವೆಂಕಟೇಶ, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ, ಕಥೆ, ಚಿತ್ರಕಥೆ, ಸಂಭಾಷಣೆ ನಿರ್ದೇಶನ ಹೊಣೆ ಸಿದ್ದು ಪೂರ್ಣಚಂದ್ರ ಹೊತ್ತಿದ್ದಾರೆ. ಈಗಾಗಲೇ ಸೆನ್ಸಾರ್ ಮಂಡಳಿಯಿಂದ ಯು ಸರ್ಟಿಫಿಕೇಟ್ ಪಡೆದಿದೆ.

ನೂರಾರು ಸಿನಿಮಾಗಳಿಗೆ ಪ್ರಚಾರಕರ್ತರಾಗಿ ಕಾರ್ಯ ನಿರ್ವಹಿಸಿರುವ ಆಟೋ ನಾಗರಾಜ್ ನಾಯಕನಾಗಿ ಬಡ್ತಿ ಪಡೆದಿದ್ದಾರೆ. ಆ ವೃತ್ತಿಯ ನಡುವೆಯೇ ಹಲವಾರು ಸಿನಿಮಾ, ಧಾರಾವಾಹಿಗಳಲ್ಲಿ ವಿವಿಧ ಪಾತ್ರಗಳನ್ನು ನಿರ್ವಹಿಸುತ್ತಾ, ನಟನಾಗಿ ರೂಪುಗೊಂಡಿದ್ದಾರೆ. ರಶ್ಮಿ, ಚೈತ್ರ, ಪ್ರಮೀಳಾ ಸುಬ್ರಹ್ಮಣ್ಯ, ಮನೋಜ್, ಹರೀಶ್ ಕುಂದೂರು, ಬೇಬಿ ರಿದಿ, ಪವಿತ್ರ, ಬಾಲರಾಜ್ ವಾಡಿ, ರೋಹಿಣಿ, ಶಂಕರ್ ಭಟ್, ಪ್ರೀತಿ, ಮೀಸೆ ಮೂರ್ತಿ ಇನ್ನೂ ಮುಂತಾದವರು ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ

# ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಡಿಸೆಂಬರ್ 7 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಡಿಸೆಂಬರ್ 7 ರಂದು ಬೆಳಿಗ್ಗೆ 7.30 ಗಂಟೆಗೆ ಹುಬ್ಬಳ್ಳಿಯಿಂದ ಗದುಗಿಗೆ ಆಗಮಿಸುವರು. ಬೆ 11 ಗಂಟೆಗೆ ನಗರದ ಕಳಸಾಪುರ ರಸ್ತೆಯಲ್ಲಿರುವ ಡಿ.ಜಿ.ಎಂ. ಆಯುರ್ವೇದ ಕಾಲೇಜಿನಲ್ಲಿ ಜರುಗುವ ವಿಶ್ವ ಏಡ್ಸ್ ಜಾಗೃತಿ ದಿನ -2024 ಹಾಗೂ ಜನ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1 ಗಂಟೆಗೆ ಗದುಗಿನಿಂದ ಹುಬ್ಬಳ್ಳಿಗೆ ಪ್ರಯಾಣಿಸುವರು. ಮರಳಿ ಸಂಜೆ 6.30 ಗಂಟೆಗೆ ಹುಬ್ಬಳ್ಳಿಯಿಂದ ಗದುಗಿಗೆ ಆಗಮಿಸುವರು.

ಸಂಜೆ 7 ಗಂಟೆಗೆ ನಗರದ ಟ್ಯಾಗೋರ ರಸ್ತೆಯಲ್ಲಿ ನೂತನವಾಗಿ ನಿರ್ಮಾಣ ಮಾಡಲಾದ ಸರೋಜಿನಿ ಶಿರೋಳ ಆಸ್ಪತ್ರೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ‘ವಿಶ್ವ ಅಂಗವಿಕಲರ ದಿನಾಚರಣೆ’ ಕಾರ್ಯಕ್ರಮದಲ್ಲಿ ಬಿಇಓ ಮಂಗಲಾ ತಾಪಸ್ಕರ್

# ಮಕ್ಕಳ ಕಲಿಕೆ ನಿರಂತರವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿಕಲತೆ ಎಂಬುದು ಶಾಪವಲ್ಲ, ಅದನ್ನು ಸವಾಲಾಗಿ ಸ್ವೀಕರಿಸಬೇಕು. ಇಂತಹ ಮಕ್ಕಳ ಬೌದ್ಧಿಕ ಹಾಗೂ ಶೈಕ್ಷಣಿಕ ಸಾಮರ್ಥ್ಯ ವೃದ್ಧಿಸುವ ಕಾರ್ಯಕ್ಕೆ ನಾವೆಲ್ಲರೂ ಮುಂದಾಗಬೇಕೆಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಲಾ ತಾಪಸ್ಕರ್ ಹೇಳಿದರು.

ಅವರು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಬೆಂಗಳೂರಿನ ಫೋರ್ಥ್‌ವೇ ಫೌಂಡೇಷನ್ ಆಶ್ರಯದಲ್ಲಿ ಗದುಗಿನ ಸರ್ಕಾರಿ ಶಾಲೆ ನಂ. 4ರಲ್ಲಿ ಜರುಗಿದ ವಿಶ್ವ ಅಂಗವಿಕಲರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಕಲಿಕೆ ನಿರಂತರವಾಗಿರಲಿ. ವಿಶೇಷ ಮಕ್ಕಳು ಸಾಧಿಸಬಲ್ಲರು. ಅವರಲ್ಲಿ ಸ್ಪೂರ್ತಿ ತುಂಬುವ ಕಾರ್ಯ ನಡೆಯಬೇಕು. ಅವರಿಗಾಗಿಯೇ ಸರ್ಕಾರದ ಹಲವಾರು ಯೋಜನೆಗಳಿದ್ದು, ಅವುಗಳ ಸದ್ವಿನಿಯೋಗವಾಗಬೇಕೆಂದರು.

ಅಂಗವಿಕಲ ಮಕ್ಕಳ ಪಾಲನೆ-ಪೋಷಣೆಯಲ್ಲಿ ಪಾಲಕರ ಪಾತ್ರ ಕುರಿತು ವಿಶೇಷ ಉಪನ್ಯಾಸ ನೀಡಿದ ಗದಗ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಸಿ. ನಾಗರಳ್ಳಿ, ಅಂಗವಿಕಲರಿಗೆ ಅನುಕಂಪ ಬೇಡ, ಅವಕಾಶಗಳು ಬೇಕು. ಅವರಿಗೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈಯಲು ಸೂಕ್ತ ಅವಕಾಶಗಳನ್ನು ಕಲ್ಪಿಸಿದಲ್ಲಿ ಅವರು ಅಗಾಧವಾದ ಸಾಧನೆ ಮಾಡಬಲ್ಲರು ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಶಹರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಕೆ. ಮಂಗಳಗುಡ್ಡ ಮಾತನಾಡಿ, ವಿಕಲಚೇತನರು ಚೈತನ್ಯಶೀಲರು. ಅನೇಕ ಪ್ರತಿಭೆಗಳು ಅವರಲ್ಲಿ ಅಡಗಿರುತ್ತದೆ. ಅವರಲ್ಲಿಯ ವಿವಿಧ ಕಲೆಗಳಿಗೆ ನಾವು ಅವಕಾಶ ನೀಡಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ ಮಾತನಾಡಿ, ವಿಶೇಷ ಚೇತನ ಮಕ್ಕಳು ಸಾಧನೆಯ ಮೆಟ್ಟಿಲೇರಿರುವವರು. ಉನ್ನತ ಹುದ್ದೆಗಳಲ್ಲಿ ಇಂದು ದಿವ್ಯಾಂಗರು ಇದ್ದು, ಪಾಲಕರು ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಬೇಕೆಂದರು.

ಇದೇ ಸಮದರ್ಭದಲ್ಲಿ ಖಾಜಾ ಹುಸೇನ ಕಾತರಕಿ, ಮಂಜು ಭರಮಣ್ಣವರ, ನಾಸಿರುದ್ದಿನ ಮಕಾನದಾರ, ಎಸ್.ಸಿ ನಾಗರಳ್ಳಿ ಅವರನ್ನು ಸನ್ಮಾನಿಸಲಾಯಿತು. ಸಂಪನ್ಮೂಲ ವ್ಯಕ್ತಿ ಶಶಿಧರ ಚಳಗೇರಿ ಸ್ವಾಗತಿಸಿ ನಿರೂಪಿಸಿದರು, ಸುನೀತಾ ತಿಮ್ಮನಗೌಡ್ರ ವಂದಿಸಿದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ದಕ್ಷಿತಾ ಎಸ್, ಪವಿತ್ರಾ ಕಿಟಗೇರಿ, ವಿವೇದಿತಾ ದೇವರಕುಂಡಿ, ಸಾಗರ ಭಜಂತ್ರಿ, ಇಜಾಜ ನದಾಫ್, ಆಕೀಬ್ ಕರಡಿ ಬಹುಮಾನ ಪಡೆದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಇ.ಡಿ. ಹುಗ್ಗೇಣವರ, ಬಸವರಾಜ ಮಟ್ಟಿ, ಗವಿಸಿದ್ಧಯ್ಯ ಹಿರೇಮಠ ಸೇರಿದಂತೆ ಪುಷ್ಪಾ ಮಾನೆ, ಮಾಲನ್ ಹೊಸಳ್ಳಿ, ರತ್ನಾ ಚಂಡೂರ, ಗಣೇಶ ದೊಡ್ಡಮನಿ, ಸೈಮನ್ ರೋಡ್ರಿಗಸ್, ಕವಿತಾ ಎಸ್, ನಸರಿನ್ ಕರಡಿ, ಅಂಬಿಕಾ ರಾಯಬಾಗಿ, ಅರ್ಚನಾ ಪಾವನ್, ಸಂಗೀತಾ ಸೋಳಂಕಿ, ರೇಖಾ ಕಿರಟಗೇರಿ, ಸತೀಶ ಗಡಾದ, ಚಂದ್ರು ಉಪ್ಪಳಕರ, ಮಂಜುಳಾ ಕಾಕಿ, ಶೃತಿ ಶ್ಯಾವಿ, ಆಶಾ ಭಜಂತ್ರಿ, ಶಹನಾಜ್ ಬೇಗಂ ನದಾಫ್, ಗೀತಾ ಸಿದ್ದನಗೌಡ್ರ ಉಪಸ್ಥಿತರಿದ್ದರು.



ಪ್ರಾಸ್ತಾವಿಕವಾಗಿ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ವಿವಿಧ ನ್ಯೂನತೆಗಳುಳ್ಳ ಮಕ್ಕಳು ಸಹ ಕಲಿಯಬಲ್ಲರು, ಆಡಬಲ್ಲರು ಎಂಬುದನ್ನು ನಾವು ಮನನ ಮಾಡಿಕೊಂಡು ಇಂತಹ ಮಕ್ಕಳೊಂದಿಗೆ ಅವಿನಾಭಾವ ಸಂಬಂಧ ಹೊಂದಬೇಕು. ಅವರ ಕಲಿಕೆಗೆ ಪೂರಕವಾಗಿ ಚಟುವಟಿಕೆ ಆಧಾರಿತ ಬೋಧನೆ ಪರಿಣಾಮಕಾರಿ, ಇದರ ಕಲಿಕೆಗೆ ಉತ್ತಮ ಪರಿಸರ ನಿರ್ಮಾಣವೇ ನಮ್ಮ ಗುರಿಯಾಗಿರಲಿ ಎಂದರು.

# ಡಾ. ಅಂಬೇಡ್ಕರರ ಚಿಂತನೆಗಳು ಶಾಶ್ವತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಶ್ವಮಾನ್ಯ ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರರು ಈ ದೇಶದ ಪ್ರಗತಿಯ ಬೆಳ್ಳಿಚುಕ್ಕಿಯಾಗಿದ್ದಾರೆ. ಸದೃಢ, ಸಶಕ್ತ, ಸಮಾನತೆಯ ರಾಷ್ಟ್ರ ನಿರ್ಮಾಣಕ್ಕೆ ಅವರು ಹಾಕಿ ಕೊಟ್ಟ ಪರಿಕಲ್ಪನೆ, ಚಿಂತನೆ, ವಿಚಾರಗಳು ಸೂರ್ಯ-ಚಂದ್ರರಂತೆ ಸದಾ ಬೆಳಕಾಗಿವೆ ಎಂದು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಹೇಳಿದರು.

ಅವರು ಶುಕ್ರವಾರ ಪುರಸಭೆಯಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ಅವರ ಮಹಾಪರಿನಿರ್ವಾಣ ದಿವಸದಂದು ಅಂಬೇಡ್ಕರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಭಾರತದ ಸಾಮಾಜಿಕ ವ್ಯವಸ್ಥೆಯಲ್ಲಿ ಸಮಾಜದ ಅತ್ಯಂತ ಕೆಳಸ್ಥರಕ್ಕೆ ನೂಕಲ್ಪಟ್ಟಿದ್ದ ಹಿಂದುಳಿದ ವರ್ಗದ ಜನರನ್ನು ಮೇಲ್ಪಂಕ್ತಿಗೆ ತರುವಲ್ಲಿ ಅಂಬೇಡ್ಕರರ ಪಾತ್ರ ಅಗ್ರಗಣ್ಯ. ಸಮಾಜದ ಎಲ್ಲರಿಗೂ ಸಮಾನ ಸ್ಥಾನಮಾನಗಳನ್ನು ಕಲ್ಪಿಸಿ, ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸಿದ ಮಹಾನ್ ಪುರಷನ ಸ್ಮರಣೆ ಈ ಭೂಮಿ ಇರುವವರೆಗೂ ನಿರಂತರವಾಗಿರಲಿದೆ. ಸ್ನೇಹ, ಪ್ರೀತಿ, ವಿಶ್ವಾಸ ಹೀಗೆ ಮಾನವೀಯ ಮೌಲ್ಯಗಳನ್ನೊಳಗೊಂಡಿರುವುದೇ ನಿಜವಾದ ಧರ್ಮ ಎಂದು ಹೇಳಿದ ಅವರ ಚಿಂತನೆಗಳು ಶಾಶ್ವತ ಸತ್ಯಗಳಾಗಿವೆ ಎಂದರು.

ಈ ವೇಳೆ ಪುರಸಭೆ ಉಪಾಧ್ಯಕ್ಷ ಫಿರ್ದೋಶ ಆಡೂರ, ಸದಸ್ಯರಾದ ರಾಮಪ್ಪ ಗಡದವರ, ವಿಜಯ ಕರಡಿ, ಫಕ್ಕಿರೇಶ ನಂದೆಣ್ಣವರ, ಮಂಜುಳಾ ಹೂಗಾರ ಸೇರಿ ಸದಸ್ಯರು, ಸಿಬ್ಬಂದಿಗಳು ಇದ್ದರು.



# ಕಾರ್ತಿಕ ದೀಪೋತ್ಸವ ಡಿ.9ಕ್ಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಕೆಂಚಲಾಪುರ ಓಣಿಯ ಕೊಟ್ಟೂರ ಬಸವೇಶ್ವರ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ನಿಮಿತ್ತ ಡಿ.9ರ ಸಂಜೆ 6ಕ್ಕೆ ಕಾರ್ತಿಕ ದೀಪೋತ್ಸವ ಜರುಗಲಿದೆ. ಪ್ರತಿವರ್ಷದ ಸಂಪ್ರದಾಯದಂತೆ ಬಳ್ಳಾರಿ ಜಿಲ್ಲೆಯ ಕೊಟ್ಟೂರಿನಲ್ಲಿ ನಡೆಯುವಂತೆ ಕೊಬ್ಬರಿ ಸುಡುವ ಮೂಲಕ ದೀಪೋತ್ಸವ, ವಿಶೇಷ ಪೂಜೆ, ಪ್ರಸಾದ ಕಾರ್ಯಕ್ರಮಗಳನ್ನು ವಿಜೃಂಭಣೆ ಮತ್ತು ಶ್ರದ್ಧಾ ಭಕ್ತಿಯಿಂದ ನೆರವೇರಿಸಲಾಗುವುದು ಎಂದು ಭಕ್ತ ಮಂಡಳಿಯ ರಾಜು ಬುರಡಿ ತಿಳಿಸಿದ್ದಾರೆ.

# ಅಡ್ನೂರ ಶರಣ ಸಾಹಿತ್ಯ ಸಮ್ಮೇಳನಕ್ಕೆ ಕೋಡಿಮಠ ಶ್ರೀಗಳು



■ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ತಾಲೂಕಿನ ಅಡ್ನೂರ ಗ್ರಾಮದಲ್ಲಿ 2025ನೇ ಜನವರಿ 20 ರಂದು ಜರಗಲಿರುವ ಅಣ್ಣಿಗೇರಿ ತಾಲೂಕು ಮಟ್ಟದ ಶರಣ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದ ಸಾನಿಧ್ಯ ವಹಿಸಲು ಹಾಸನ ಜಿಲ್ಲೆ ಅರಸೀಕೆರೆ ತಾಲೂಕಿನ ಹಾರನಹಳ್ಳಿ ಕೋಡಿಮಠ ಮಹಾಸಂಸ್ಥಾನದ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಗಳು ಮನಪೂರ್ವಕ ಒಪ್ಪಿಗೆ ನೀಡಿದ್ದಾರೆ.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಅಣ್ಣಿಗೇರಿ ತಾಲೂಕು ಘಟಕದ ಅಧ್ಯಕ್ಷ ಎನ್.ಎಂ. ಯಲಬುರ್ಗಿ ಅವರ ನೇತೃತ್ವದಲ್ಲಿ ಭೇಟಿಯಾದ ನಿಯೋಗದ ಬಿನ್ನಹಕ್ಕೆ ಕೋಡಿಮಠ ಶ್ರೀಗಳು ಈ ಒಪ್ಪಿಗೆ ನೀಡಿದರು.

ಇದೇ ಸಂದರ್ಭದಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾದ ಅಡ್ನೂರಿನವರೇ ಆದ ಖ್ಯಾತ ಪ್ರವಚನಕಾರ, ಕಲಾವಿದ ಶರಣ ಶ್ರೀ ಎಂ. ಕಲ್ಲಿನಾಥ ಶಾಸ್ತ್ರಿ ಅವರಿಗೆ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಪಾಲ್ಗೊಳ್ಳಲು ಆಮಂತ್ರಿಸಿ ಕೋಡಿಮಠ ಶ್ರೀಗಳ ಮುಖಾಂತರ ಅಧಿಕೃತ ಆಮಂತ್ರಣ ನೀಡಲಾಯಿತು.

ನಿಯೋಗದಲ್ಲಿ ವೀರೇಶ ಶಾನುಭೋಗರ, ಪಿ.ಕೆ. ಕೋಕಾಟೆ, ಲಿಂಗನಗೌಡ ಪಾಟೀಲ ಹಾಗೂ ಚಂದ್ರಶೇಖರ ಸುರಕೋಡ ಇದ್ದರು

# ಶ್ರೀ ಶಿರಡಿ ಸಾಯಿಬಾಬಾ ದೇವಸ್ಥಾನದಲ್ಲಿ ಕಾರ್ತಿಕೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಳೇ ಸರಾಫ ಬಜಾರ ಕರೂಗಲ್ ಓಣಿಯ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಶ್ರೀ ಸಾಯಿ ಸೇವಾ ಸಮಿತಿ ವತಿಯಿಂದ ಶ್ರೀ ಕಾರ್ತಿಕ ದಿಪೋತ್ಸವ ಜರುಗಿತು.

ಕಾರ್ಯಕ್ರಮದವನ್ನು ನಗರಸಭಾ ಸದಸ್ಯ ನಾಗರಾಜ ಹುಲಿಗೆಪ್ಪ ತಳವಾರ ಉದ್ಘಾಟಿಸಿ ಮಾತನಾಡಿ, ದೀಪದ ಬೆಳಕಿನಂತೆ ಮನುಷ್ಯನ ಭಾವನೆಗಳು ಪರಿಶುದ್ಧವಾಗಿರಲಿ. ದೀಪ ಎಲ್ಲರನ್ನೂ ಒಗ್ಗೂಡಿಸುವ, ಭಾಂದವ್ಯ ಬೆಸೆಯುವ ಚೈತನ್ಯ ಶಕ್ತಿ ಹೊಂದಿದೆ. ಮನುಷ್ಯನಲ್ಲಿನ ಕತ್ತಲೆಯನ್ನು ತೊಡೆದು ಹೊಸ ಬೆಳಕನ್ನು ನೀಡುವ ಸಂಕೇತವಾದ ಇಂತಹ ಪವಿತ್ರ ಆಚರಣೆಗಳಿಗೆ ಅತ್ಯಂತ ಮಹತ್ವದ ಸ್ಥಾನವಿದೆ ಎಂದು ಹೇಳಿದರು.

28ನೇ ವಾರ್ಡ್‌ನ ನಗರಸಭಾ ಸದಸ್ಯ ಹಾಗೂ ಸ್ಥಾಯಿ ಸಮಿತಿ ಅಧ್ಯಕ್ಷ ಅನಿಲ್ ಅಬ್ಬಿಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂಧರ್ಭದಲ್ಲಿ ಸಮಿತಿಯ ಅಧ್ಯಕ್ಷ ಸಂತೋಷ ಕಬಾಡರ, ಕಾರ್ಯದರ್ಶಿ ಮಂಜುನಾಥ ಮಜ್ಜಿಗುಡ್ಡ, ಸಹಕಾರ್ಯದರ್ಶಿ ಸುನೀಲ್ ಮುಳ್ಳಾಳ, ಖಜಾಂಚಿ ಮಹೇಶ ಕೋರಿ, ಹಿರಿಯರಾದ ವಿಜಯಕುಮಾರ ಕಬಾಡರ್, ಈಶಪ್ಪ ಕರೂಗಲ್, ಸಮಿತಿಯ ಸದ್ಯರಾದ ಬಾಬು ಸುಲಾಖೆ, ಮಂಜುನಾಥ ಕರೂಗಲ್, ಅನಿಲ್ ಮುಳ್ಳಾಳ, ಸುರೇಶ ಚಿತ್ರಗಾರ, ಪ್ರವೀಣ ವಾರಕರ್, ಅಪ್ಪು ಕೊಟ್ಟಗಿ, ಅಪ್ಪು ಅಬ್ಬಿಗೇರಿ, ಪ್ರಸಾದ ಅಬ್ಬಿಗೇರಿ, ಸಂದೀಪ ಮುಣೇಕರ್, ಕೇದಾರ ಅಬ್ಬಿಗೇರಿ, ವಿಶಾಲ ಶಿದ್ಲಿಂಗ್ ಇದ್ದರು. ಪ್ರಸಾದ ಸೇವೆಯನ್ನು ಮಲ್ಲು ಚಿಂಚಲಿ ನೇರವೆರಿಸಿದರು.



### ಗದಗ ಬೆಟಗೇರಿ-ಇನ್ನರವ್ಹೀಲ್ ಕ್ಲಬ್‌ನ್ ದತ್ತು ಶಾಲೆಯ ಕಾರ್ಯಕ್ರಮ

# ಸರ್ಕಾರಿ ಶಾಲೆಗಳ ಸಬಲೀಕರಣ ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಶತಮಾನೋತ್ಸವ ಸಂಭ್ರಮದಲ್ಲಿರುವ ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಶಾಲಾ ಮಕ್ಕಳಿಗೆ ಶೈಕ್ಷಣಿಕ ಚಟುವಟಿಕೆಗಳ ಸ್ಪೂರ್ತಿಗಾಗಿ ಕಲಿಕಾ ಸಾಮಗ್ರಿಗಳನ್ನು ವಿತರಿಸುವ ಮೂಲಕ ಗದಗ-ಬೆಟಗೇರಿ ಇನ್ನರವ್ಹೀಲ್ ಕ್ಲಬ್ ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಮುಂದಾಗಿದೆ ಎಂದು ಇನ್ನರ್‌ವ್ಹೀಲ್ ಡಿಸ್ಟ್ರಿಕ್ಟ್ ಚೇರಮನ್ ಜ್ಯೋತಿ ಕಿರಣ್ ದಾಸ್ ಹೇಳಿದರು.

ಅವರು ಗದಗ-ಬೆಟಗೇರಿ ಇನ್ನರವ್ಹೀಲ್ ಕ್ಲಬ್‌ನ್ ದತ್ತು ಶಾಲೆಯಾದ ಗದುಗಿನ ಸರ್ಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ 1ರಲ್ಲಿ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ‘ಹ್ಯಾಪಿ ಸ್ಕೂಲ್’ ಎಂದು ಘೋಷಿಸಿ ಮಾತನಾಡಿದರು.

ಸರ್ಕಾರಿ ಶಾಲೆಗಳ ಮಕ್ಕಳು ಪಾಠದೊಂದಿಗೆ ಬದುಕಿನ ನಿಜ ಅರಿವನ್ನು ತಿಳಿದುಕೊಳ್ಳುತ್ತಾರೆ. ಪುರಾತನವಾದ ಸರ್ಕಾರಿ ಶಾಲೆಗಳು ಅನೇಕ ಮಹಾನ್ ವ್ಯಕ್ತಿಗಳನ್ನು ದೇಶಕ್ಕೆ ಕೊಡುಗೆಯಾಗಿ ನೀಡಿವೆ. ಈ ಶಾಲೆಯ ಶೈಕ್ಷಣಿಕ ಅಭಿವೃದ್ಧಿಗಾಗಿ ಗದಗ-ಬೆಟಗೇರಿ ಇನ್ನರವ್ಹೀಲ್ ಕ್ಲಬ್ ಶಾಲೆಯನ್ನು ದತ್ತು ಪಡೆದು ಮಕ್ಕಳಿಗೆ ಸಾಧನಾ ಸಲಕರಣೆಗಳನ್ನು ವಿತರಿಸಿ ಶಾಲಾಭಿವೃದ್ಧಿಗೆ ಕೈಜೋಡಿಸಿದೆ ಎಂದರು.

ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಲಾ ತಾಪಸ್ಕರ್ ಮಾತನಾಡಿ, ಸಂಘ-ಸಂಸ್ಥೆಗಳು, ಮಹಿಳಾ ಸಂಘಟನೆಗಳು, ಸರ್ಕಾರಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಮಗುವಿನ ಅವಶ್ಯಕತೆಗಳಿಗೆ ಸೌಲಭ್ಯಗಳನ್ನು ಒದಗಿಸಿ ಶತಮಾನೋತ್ಸವ ಶಾಲೆಗೆ ಕೈಜೋಡಿಸಿರುವುದು ಅಭಿನಂದನೀಯ ಎಂದರು.

ಕ್ಲಬ್ ಅಧ್ಯಕ್ಷೆ ನಾಗರತ್ನಾ ಮಾರನಬಸರಿ ಸ್ವಾಗತಿಸಿದರು, ಕಾರ್ಯದರ್ಶಿ ವೀಣಾ ತಿರ್ಲಾಪೂರ ನಿರೂಪಿಸಿದರು. ಸಿ.ಎಲ್.ಸಿಸಿ ಸುಮಾ ಪಾಟೀಲ ಪರಿಚಯಿಸಿದರು. ಐ.ಎಸ್.ಓ ಪುಷ್ಪಾ ಭಂಡಾರಿ ವಂದಿಸಿದರು.

ಕಾರ್ಯಕ್ರಮದ ಪ್ರಾಯೋಜಕತ್ವವನ್ನು ಶಾಂತಾ ನಿಂಬಣ್ಣವರ, ಅನ್ನಪೂರ್ಣಾ ವರವಿ, ಮೀನಾಕ್ಷಿ ಕೊರವನವರ ವಹಿಸಿಕೊಂಡಿದ್ದರು. ಕ್ಲಬ್‌ನ ಡಿ.ಎಲ್.ಸಿ.ಸಿ ನಂದಾ ಜಡಭೋಕಿ, ಕ್ಲಬ್‌ನ ಪಿ.ಡಿ.ಸಿ ಪ್ರೇಮಾ ಗುಳಗೌಡ್ರ, ಶ್ರೇಯಾ ಪವಾಡಶೆಟ್ಟರ, ಪ್ರತಿಭಾ ಭದ್ರಶೆಟ್ಟಿ, ಅಶ್ವಿನಿ ಜಗತಾಪ, ರಜನಿ ಪಾಟೀಲ, ಸುವರ್ಣಾ ವಸ್ತ್ರದ, ಶಿಕ್ಷಕರಾದ ಪವಿತ್ರಾ ಹಿರೇಮಠ, ಸುನಂದಾ ಕುಂಟೋಜಿ ಮುಂತಾದವರಿದ್ದರು.




ಶಾಲಾ ಮುಖ್ಯೋಪಾಧ್ಯಾಯೆ ವಿಜಯಾ ಜಕರಡ್ಡಿ ಮಾತನಾಡಿ, ಅಂತಾರಾಷ್ಟ್ರೀಯ ಸಂಸ್ಥೆಗಳು ಶತಮಾನೋತ್ಸವ ಶಾಲೆಯತ್ತ ಬಂದಿರುವುದು ಸಂತಸ ತಂದಿದೆ. ಶಾಲೆಯ ಮಕ್ಕಳಿಗಾಗಿ ನೀರಿನ ಬಾಟಲ್, ಕೋಲಾಟದ ಕೋಲುಗಳು, ಕ್ರೀಡಾ ಸಾಮಗ್ರಿ, ಗ್ರಂಥಾಲಯದ ಪುಸ್ತಕಗಳು, ರ್‍ಯಾಕ್, ನೀರಿನ ಮೂಲಭೂತ ಸೌಲಭ್ಯಗಳನ್ನು ಸರಿಗೊಳಿಸಿ ಶಾಲೆಗೆ ಸಹಾಯ ಮಾಡಿದ್ದಾರೆ ಎಂದರು.

## ‘ಮೋದಿ ಅದಾನಿ ಭಾಯಿ ಭಾಯಿ..’; ಕಪ್ಪು ಮಾಸ್ಕ್ ಧರಿಸಿ ವಿಪಕ್ಷ ಸಂಸದರಿಂದ ಪ್ರತಿಭಟನಾ ಮೆರವಣಿಗೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

‘ಮೋದಿ ಅದಾನಿ ಏಕ್ ಹೈ’ ಮತ್ತು ‘ಅದಾನಿ ಸೇಫ್ ಹೈ’ ಎಂಬ ಸ್ಟಿಕ್ಕರ್‌ಗಳುಳ್ಳ ಕಪ್ಪು ಜಾಕೆಟ್‌ಗಳನ್ನು ಧರಿಸಿ ಗುರುವಾರ ಸಂಸತ್ ಆವರಣದಲ್ಲಿ ಪ್ರತಿಭಟನೆ ನಡೆಸಿದ್ದ ಇಂಡಿಯಾ ಮೈತ್ರಿಕೂಟದ ಸಂಸದರು, ಇಂದು ಕಾಂಗ್ರೆಸ್ ನೇತೃತ್ವದಲ್ಲಿ ‘ಮೋದಿ ಅದಾನಿ ಭಾಯಿ ಭಾಯಿ..’ ಎಂಬ ಕಪ್ಪು ಮಾಸ್ಕ್ ಧರಿಸಿ, ಕೈನಲ್ಲಿ ಸಂವಿಧಾನದ ಪ್ರತಿ ಹಿಡಿದು ಮೆರವಣಿಗೆ ನಡೆಸಿದರು.

ಅದಾನಿ ವಿಷಯದ ಕುರಿತು ಸಂಸತ್ತಿನ ಆವರಣದಲ್ಲಿ “ಮೋದಿ ಅದಾನಿ ಭಾಯಿ ಭಾಯಿ” ಎಂದು ಬರೆದ ಕಪ್ಪು ಮಾಸ್ಕ್ ಧರಿಸಿ ಪ್ರತಿಭಟನಾ ಮೆರವಣಿಗೆ ನಡೆಸಿದರು. ಪ್ರತಿಭಟನೆಯಲ್ಲಿ ಕೆಲವು ಇಂಡಿಯಾ ಬ್ಲಾಕ್ ಪಕ್ಷಗಳ ಹಲವಾರು ನಾಯಕರು ಮೆರವಣಿಗೆ ನಡೆಸಿದರು. ಸಂವಿಧಾನದ ಪ್ರತಿಯನ್ನು ಹಿಡಿದುಕೊಂಡು ಕೈಗಾರಿಕೋದ್ಯಮಿ ಗೌತಮ್ ಅದಾನಿ ವಿರುದ್ಧ ಘೋಷಣೆಗಳನ್ನು ಎತ್ತಿದರು. ಆರ್‌ಜೆಡಿ, ಜೆಎಂಎಂ ಮತ್ತು ಎಡಪಕ್ಷಗಳ ಸಂಸದರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಪ್ರತಿಭಟನೆಯಲ್ಲಿ ಭಾಗವಹಿಸದ ಟಿಎಂಸಿ ಮತ್ತು ಸಮಾಜವಾದಿ ಪಕ್ಷಗಳು ಅದಾನಿ ವಿರುದ್ಧದ ಯಾವುದೇ ಖಂಡನೆಯಿಂದ ದೂರ ಉಳಿದಿವೆ. ಈ ನಿರ್ಧಾರವನ್ನು ಆಡಳಿತಾರೂಢ ಭಾರತೀಯ ಜನತಾ ಪಕ್ಷ (ಬಿಜೆಪಿ) ವಿರೋಧ ಪಕ್ಷಗಳ ವಿಭಜನೆ ಎಂದು ಪರಿಗಣಿಸಿದೆ.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಅವರ ಸಹೋದರಿ ಪ್ರಿಯಾಂಕಾ ಗಾಂಧಿ ವಾದ್ರಾ ಮೆರವಣಿಗೆಯಲ್ಲಿ ಉಪಸ್ಥಿತರಿದ್ದರು.

ಅದಾನಿ ವಿಷಯದ ಬಗ್ಗೆ ಚರ್ಚೆ ನಡೆಸಲು ಸರ್ಕಾರ ಹೆದರುತ್ತಿದೆ? ಏಕೆ ಹೀಗೆ ಎಂದು ಆಶ್ಚರ್ಯಪಡುತ್ತಿದೆ ಎಂದು ಪ್ರಿಯಾಂಕಾ ನಂತರ ಆರೋಪಿಸಿದರು.

# ಇಂದು ವಿಶ್ವ ಏಡ್ಸ್ ಜಾಗೃತಿ ದಿನ, ಜನಜಾಗೃತಿ ಜಾಥಾ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಜಿಮ್ಸ್ ರಕ್ತ ನಿಧಿ ಕೇಂದ್ರ ಜಿಲ್ಲಾ ಆಸ್ಪತ್ರೆ, ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜ್, ಗಾಂಧೀಜಿ ಪ್ಯಾರಾ ಮೆಡಿಕಲ್ ಕಾಲೇಜ್, ಪಾಲನಗಾಲಾ ನರ್ಸಿಂಗ್ ಕಾಲೇಜ್, ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆ, ಆಯ್.ಎಂ.ಎ ರಕ್ತ ಭಂಡಾರ, ರಕ್ಷಣೆ ಜಿಲ್ಲಾ ಮಹಿಳಾ ಒಕ್ಕೂಟ, ಸೃಷ್ಟಿ ಸಂಕುಲ ಸಂಸ್ಥೆ, ನವ ಚೇತನ ಸಂಸ್ಥೆ, ಚೈತನ್ಯ ನಗರ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ಡಿಜಿಎಂ ಆರ್ಯುವೇದ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ರೆಡ್ ರಿಬ್ಬನ್ ಕ್ಲಬ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಏಡ್ಸ್ ಜಾಗೃತಿ ದಿನ –2024 ಹಾಗೂ ಜನಜಾಗೃತಿ ಜಾಥಾವನ್ನು ಡಿಸೆಂಬರ್ 7 ರಂದು ಮುಂಜಾನೆ 11 ಗಂಟೆಗೆ ನಗರದ ಕಳಸಾಪೂರ ರಸ್ತೆಯಲ್ಲಿರುವ ಡಿಜಿಎಂ ಆರ್ಯುವೇದ ಕಾಲೇಜನಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ ಗುಂಡೂರಾವ್ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಸಿ ಎಸ್ ಶಿವನಗೌಡ್ರ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಅಧ್ಯಕ್ಷರು/ಕಾರ್ಯದರ್ಶಿಗಳು, ಡಿಜಿಎಂ ಆಯುರ್ವೇದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ಸಂತೋಷ ಬೆಳವಡಿ ಆಗಮಿಸುವರು. ಜಿಮ್ಸ್ ಸಮುದಾಯ ಆರೋಗ್ಯ ವಿಭಾಗದ ಡಾ.ಅರವಿಂದ ಕರಿನಾಗಣ್ಣನವರ ಉಪನ್ಯಾಸ ನೀಡುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಡಾ.ಎಸ್ ಎಸ್ ನೀಲಗುಂದ, ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಅರುಂಧತಿ ಕುಲಕರ್ಣಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಬಿ.ಸಿ ಕರಿಗೌಡರ ಸ್ವಾಗತ ಕೋರಿದ್ದಾರೆ.

**'ಜಾಗತಿಕ ಮಣ್ಣು ದಿನ' ಆಚರಣೆ ಕಾರ್ಯಕ್ರಮದಲ್ಲಿ ಯುವ ಮುಖಂಡ ಕೃಷ್ಣಗೌಡ ಪಾಟೀಲ**

# ರಾಸಾಯನಿಕ ಮುಕ್ತ ಕೃಷಿಯಲ್ಲಿ ತೊಡಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವಕರು ಕೃಷಿಯತ್ತ ಮುಖ ಮಾಡಬೇಕು. ಅದೂ ರಾಸಾಯನಿಕ ಮುಕ್ತ ಸಾವಯವ ಕೃಷಿಯಲ್ಲಿ ತೊಡಗುವ ಮೂಲಕ ತಮ್ಮ ಕುಟುಂಬ ಹಾಗೂ ಸಮಾಜದ ಸ್ವಾಸ್ಥ್ಯ ಕಾಪಾಡಬೇಕು ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ, ಯುವ ಮುಖಂಡ ಕೃಷ್ಣಗೌಡ ಪಾಟೀಲ ಹೇಳಿದರು.

'ಜಾಗತಿಕ ಮಣ್ಣು ದಿನ' ಆಚರಣೆ ಅಂಗವಾಗಿ ಸಂಕಲ್ಪ ಸಂಸ್ಥೆಯ ವತಿಯಿಂದ ತಾಲೂಕಿನ ಬೆಳಧಡಿ ತಾಂಡಾದ ಶ್ರೀ ಶರಣ ಬಸವೇಶ್ವರ ದೇವಸ್ಥಾನದಲ್ಲಿ ಆಯೋಜಿಸಿದ್ದ ಅಜೀಂ ಪ್ರೇಮಜಿ ಫೌಂಡೇಶನ್ ಯೋಜನೆ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಮಾರಂಭವನ್ನು ಉದ್ಘಾಟಿಸಿದ ಹುಲಕೋಟಿಯ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ, ಸಲಹೆಗಾರರಾದ ಡಾ. ಎಲ್.ಎಚ್. ಹೀರೇಗೌಡ್ರ ಮಾತನಾಡಿ, ಸಂಕಲ್ಪ ಸಂಸ್ಥೆಯು ಗದಗ ಜಿಲ್ಲೆಯ ಮಂಡರಗಿ ಭಾಗದಲ್ಲಿ ಕೃಷಿ ಹೊಂಡಗಳು ಮತ್ತು ದೊಡ್ಡ ಊರಿನ ಕೆರೆಗಳ ಹೂಳೆತ್ತುವ ಕೆಲಸವನ್ನು ಗ್ರಾಮ ಪಂಚಾಯಿತಿಯ ಸಹಕಾರದೊಂದಿಗೆ ಆಯ್ದ



ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸಿದ್ದು ಇದರ ಹೆಗ್ಗುರುತಾಗಿದೆ. ಹಾಗಾಗಿ ಈ ವರ್ಷದಿಂದ ಮುಂದಿನ ಮೂರು ವರ್ಷಗಳ ಕಾಲ ಸಂಕಲ್ಪ ಸಂಸ್ಥೆಯು ಗದಗ ತಾಲೂಕಿನ 13 ಹಳ್ಳಿಗಳಲ್ಲಿ ಬೋರ್‌ವೆಲ್ ರೀಚಾರ್ಜ್, ಕೃಷಿ ಹೊಂಡ ಮತ್ತು ಸಾರ್ವಜನಿಕ ಕೆರೆಗಳ ಹೂಳೆತ್ತುವ ಯೋಜನೆಯನ್ನು ನಿರ್ವಹಿಸಲು ಸಿದ್ಧವಾಗಿದೆ ಎಂದರು.

ಹುಲಕೋಟಿಯ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಹಾಗೂ ಸಲಹೆಗಾರ ಡಾ. ಎನ್.ಎಚ್. ಬಂಡಿ ಮಾತನಾಡಿ, ಜಾಗತಿಕ ಮಣ್ಣು ದಿನದ ಆಚರಣೆ ಮಾಡುತ್ತಿದ್ದು, ನಾವುಗಳು ಮಣ್ಣಿನ ಫಲವತ್ತತೆ ಮತ್ತು ತಂತ್ರಜ್ಞಾನದ ಅರಿವನ್ನು ಹೊಂದಿರಬೇಕು ಎಂದು ವಿವರವಾದ ಮಾಹಿತಿಯನ್ನು ತಿಳಿಸಿದರು.

ಸಂಕಲ್ಪ ರೂರಲ್ ಡೆವಲಪ್‌ಮೆಮಟ್ ಸೊಸೈಟಿಯ ಸಂಸ್ಥಾಪಕ ಸಿಕಂದರ ಮೀರಾನಾಯಕ ಮಾತನಾಡಿ, ಸಂಕಲ್ಪ ಸಂಸ್ಥೆಯು ನಡೆದುಬಂದ ದಾರಿಯನ್ನು ವಿಸ್ತಾರವಾಗಿ ತಿಳಿಸುತ್ತ, ನಮ್ಮ ಸಂಕಲ್ಪ ಸಂಸ್ಥೆ ಸದಾ ನಿಮ್ಮೊಂದಿಗೆ ಇರುತ್ತದೆ ಎಂದು ಹೇಳಿದರು.

ಬೆಳಧಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಶಂಕ್ರಪ್ಪ ಶಿವಪ್ಪ ಹೊಸಮನಿ ಅಧ್ಯಕ್ಷತೆ ವಹಿಸಿದ್ದರು. ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಲಕ್ಷ್ಮವ್ವ ಮುತ್ತಪ್ಪ ಮುಂದಲಮನಿ ವೇದಿಕೆಯಲ್ಲಿದ್ದರು.

ಕಾರ್ಯಕ್ರಮದಲ್ಲಿ ಹನಮಂತ ದಾಸರ ಸೇರಿದಂತೆ ಗ್ರಾಮಸ್ಥರು, ಯುವಕರು ಮತ್ತು ಮಹಿಳೆಯರು ಭಾಗವಹಿಸಿದ್ದರು.

ಜನರ ಒಗ್ಗಟ್ಟು ಮತ್ತು ಸಹಕಾರ ಇದ್ದರೆ ಇಂತಹ ಸಂಘ–ಸಂಸ್ಥೆಗಳು ಸಾಕಷ್ಟು ಯೋಜನೆಗಳನ್ನು ತಂದು ಕೊಡುತ್ತವೆ. ಇಂತಹ ಸಂಸ್ಥೆಗಳೊಂದಿಗೆ ಯಾವುದೇ ರಿತೀಯ ರಾಜಕೀಯ ಮಾಡದೇ ಸಹಕಾರ ನೀಡಿದರೆ ನಿಮ್ಮ ಜೀವನಕ್ಕೆ ಅನುಕೂಲವಾಗುತ್ತದೆ. ಆದ್ದರಿಂದ ಇದರ ಉಪಯೋಗವನ್ನು ಪಡೆದುಕೊಂಡು ಅಭಿವೃದ್ಧಿಯೊಂದಿಗೆ ಸಾಗುವ ಗುರಿಯನ್ನು ಹೊಂದಬೇಕು ಎಂದು ಕೃಷ್ಣಗೌಡ ಪಾಟೀಲ ಸಲಹೆ ನೀಡಿದರು

**ಪ್ರೊ. ಸಿ.ವಿ. ಕೆರಿಮನಿ ತಿರುಳ್ಗನ್ನಡ ಸಿರಿ ದತ್ತಿ ಪ್ರಶಸ್ತಿ ಪ್ರದಾನ ಇಂದು**


# ಡಾ. ಸಿದ್ಧಣ್ಣ ಜಕಬಾಳರಿಗೆ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಡಿ.7ರಂದು ತೋಂಟದ ಗದುಗಿನ ಸಿದ್ಧಲಿಂಗಶ್ರೀ ಕನ್ನಡ ಭವನದ ಕಸಾಪ ಕಾರ್ಯಾಲಯದಲ್ಲಿ ಸಂಜೆ 6 ಗಂಟೆಗೆ ಜರುಗುವ ದತ್ತಿ ಕಾರ್ಯಕ್ರಮದಲ್ಲಿ 'ಪ್ರೊ. ಸಿ.ವಿ. ಕೆರಿಮನಿ ತಿರುಳ್ಗನ್ನಡ ಸಿರಿ' ದತ್ತಿ ಪ್ರಶಸ್ತಿಯನ್ನು ಖ್ಯಾತ ಜಾನಪದ ವಿದ್ವಾಂಸರಾದ ಡಾ. ಸಿದ್ಧಣ್ಣ ಜಕಬಾಳ ಇವರಿಗೆ ಪ್ರದಾನ ಮಾಡುವ ಸಮಾರಂಭ ಜರುಗಲಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಬೆಳ್ಳಟ್ಟಿಯ ಶ್ರೀ ರಾಮಲಿಂಗೇಶ್ವರ ದಾಸೋಹಮಠದ ಪೂಜ್ಯ ಮ.ನಿ.ಪ್ರ. ಬಸವರಾಜ ಮಹಾಸ್ವಾಮಿಗಳು ವಹಿಸುವರು. ಕಸಾಪ ಮಾಜಿ ಅಧ್ಯಕ್ಷ ಪ್ರೊ. ಎ.ಬಿ. ಹಿರೇಮಠ ಪ್ರಶಸ್ತಿ ಪ್ರದಾನ ಮಾಡುವರು. ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ





ಪಾಟೀಲ ವಹಿಸುವರು. ಲಲಿತಾ ಸಿ.ಕೆರಿಮನಿ ಉಪಸ್ಥಿತರಿರುವರು.

ಡಾ. ಸಿದ್ಧಣ್ಣ ಜಕಬಾಳ ಅವರು ನಮ್ಮ ನಾಡಿನ ಹೆಸರಾಂತ ಜನಪದ ವಿದ್ವಾಂಸರು. ಬರೆಹ, ಉಪನ್ಯಾಸ ಹಾಗೂ ಪ್ರಾತ್ಯಕ್ಷಿಕೆಗಳ ಮೂಲಕ ಜನಪದ ಕಲಾ ಪ್ರಕಾರವನ್ನು ಇಂದಿನ ತಲೆಮಾರಿಗೆ ವರ್ಗಾಯಿಸುವ ಮಹತ್ವದ ಕಾರ್ಯವನ್ನು ಮಾಡುತ್ತಿದ್ದಾರೆ.

ಗದುಗಿನ ಕೆ.ಎಸ್.ಎಸ್. ಪದವಿ ಮಹಾವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ, ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. 17ಕ್ಕೂ ಅಧಿಕ ಪುಸ್ತಕಗಳನ್ನು, ನೂರಾರು ಲೇಖನಗಳನ್ನು ಬರೆದಿದ್ದಾರೆ. ರಾಷ್ಟ್ರ ಹಾಗೂ ರಾಜ್ಯಮಟ್ಟದ ಅನೇಕ ವಿಚಾರಗೋಷ್ಠಿಗಳಲ್ಲಿ ಭಾಗವಹಿಸಿ ನವೀನ ವಿಚಾರಗಳನ್ನು ಮಂಡಿಸಿದ್ದಾರೆ.

ದೊಡ್ಡಾಟ ಹಾಗೂ ಸಣ್ಣಾಟಗಳ ಹಸ್ತಪ್ರತಿ ಹಾಗೂ ಜನಪದ ಹಾಡುಗಳ ಧ್ವನಿ ಸುರಳಿಗಳನ್ನು ಸಂಗ್ರಹಿಸಿದ್ದಾರೆ. ಜನಪದ ಹಾಡು ಹಾಗೂ ವಾದ್ಯಗಳನ್ನು ನುಡಿಸುವದರಲ್ಲಿ ಪ್ರಾವೀಣ್ಯತೆ ಹೊಂದಿದ್ದಾರೆ. ಇವರು ಅನೇಕ ಪ್ರಶಸ್ತಿ–ಪುರಸ್ಕಾರಗಳಿಂದ ಭಾಜನರಾಗಿದ್ದಾರೆ.

ಈ ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಪರಿಷತ್ತಿನ ಸದಸ್ಯರು, ಆಸಕ್ತರು ಭಾಗವಹಿಸಬೇಕೆಂದು ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ಕೋರಿದ್ದಾರೆ.

ಪ್ರೊ. ಸಿ.ವಿ. ಕೆರಿಮನಿ ಅವರು ಬರಹಗಾರರಾಗಿ, ಪ್ರಾಚಾರ್ಯರಾಗಿ ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿದ್ದಾರೆ. 30ಕ್ಕೂ ಅಧಿಕ ಪುಸ್ತಕಗಳನ್ನು ಬರೆದಿದ್ದಾರೆ. ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಥಮ ಅಧ್ಯಕ್ಷರಾಗಿ ಅನುಪಮ ಸೇವೆ ಸಲ್ಲಿಸಿದ್ದಾರೆ. ಇವರ ಹೆಸರಿನಲ್ಲಿ ಕುಟುಂಬವರ್ಗ ಪರಿಷತ್ತಿನಲ್ಲಿ ದತ್ತಿನಿಧಿ ಸ್ಥಾಪಿಸಿದೆ. ಇದರ ಪ್ರಥಮ ಪ್ರಶಸ್ತಿಯನ್ನು ಜಾನಪದ ತಜ್ಞ ಡಾ. ಸಿದ್ದಣ್ಣ ಜಕಬಾಳ ಅವರಿಗೆ ನೀಡಲಾಗುತ್ತಿದೆ.

**ಶಿರಹಟ್ಟಿ ಉಪನೋಂದಣಿ ಕಚೇರಿಯಲ್ಲಿ ಮಿತಿಮೀರಿದ ಮಧ್ಯವರ್ತಿಗಳ ಹಾವಳಿ**

# ಮಧ್ಯವರ್ತಿಗಳ ದರ್ಬಾರ್‌ಗೆ ಬೇಕಿದೆ ಮುಕ್ತಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಮೀಸಲು ಮತಕ್ಷೇತ್ರದ ಕೇಂದ್ರಸ್ಥಳದ ಜೊತೆಗೆ ತಾಲೂಕಾ ಆಡಳಿತದ ಶಕ್ತಿ ಕೇಂದ್ರವಾಗಿದೆ. ಹೀಗಾಗಿ ಇಲ್ಲಿ ನಿತ್ಯವೂ ವಿವಿಧ ಕೆಲಸ–ಕಾರ್ಯಗಳಿಗೆ ಗ್ರಾಮೀಣ ಪ್ರದೇಶಗಳ ಜನತೆ ಆಗಮಿಸುತ್ತಾರೆ. ಪ್ರಮುಖವಾಗಿ ಶಿರಹಟ್ಟಿಯ ಉಪನೋಂದಣಿ ಕಚೇರಿಯಲ್ಲಿ ಹಲವು ತಿಂಗಳುಗಳಿಂದ ಅಧಿಕೃತ ಬರಹಗಾರರನ್ನು ಮೀರಿಸುವಂತೆ ಮಧ್ಯವರ್ತಿಗಳ ದರ್ಬಾರ್ ಹೆಚ್ಚಾಗುತ್ತಿದ್ದು, ಇದಕ್ಕೆ ಮುಕ್ತಿ ಯಾವಾಗ ಎಂಬ ಪ್ರಶ್ನೆ ಇಲ್ಲಿಯ ಪ್ರಜ್ಞಾವಂತರನ್ನು ಕಾಡುತ್ತಿದೆ.

ಶಿರಹಟ್ಟಿಯ ಉಪ ನೋಂದಣಿ ಕಚೇರಿಯಲ್ಲಿ ಹಲವು ವರ್ಷಗಳಿಂದ ಖಾಯಂ ಉಪನೋಂದಣಾಧಿಕಾರಿ ಹುದ್ದೆ ಖಾಲಿ ಇದ್ದು, ತಾತ್ಕಾಲಿಕವಾಗಿ





ಇಲಾಖೆಯು ಬೇರೆ ಕಡೆಯಿಂದ ಸಿಬ್ಬಂದಿಗಳನ್ನು ನಿಯೋಜಿಸಿ ಕೆಲಸ–ಕಾರ್ಯಗಳು ನಡೆಯುವಂತೆ ಅನುಕೂಲ ಕಲ್ಪಿಸಿದೆ. ಆಡಳಿತ ಸುಗಮವಾಗಿ ಹಾಗೂ ಪಾರದರ್ಶಕತೆಯಿಂದ ಇರುವ ಉದ್ದೇಶಕ್ಕಾಗಿ ಇತ್ತೀಚೆಗೆ ಸರಕಾರ ಆನ್‌ಲೈನ್ ವ್ಯವಸ್ಥೆ ಜಾರಿಗೊಳಿಸಿದೆ. ಈ ಕೆಲಸ–ಕಾರ್ಯಗಳನ್ನು ಮಾಡುವುದಕ್ಕೆ ಅಧಿಕೃತ ದಸ್ತಾವೇಜು ಬರಹಗಾರರು ಸಹ ಇದ್ದಾರೆ. ಇವರನ್ನು ಮೀರಿಸುವಂತೆ ಕೆಲವು ಮಧ್ಯವರ್ತಿಗಳು ಹಾಗೂ ಏಜೆಂಟರು ಈ ಕೆಲಸಗಳನ್ನು ನಾವೇ ಮಾಡಿಸಿಕೊಡುತ್ತೇವೆಂದು ನಂಬಿಸಿ ತಮಗಿಷ್ಟ ಬಂದಂತೆ ಸಾರ್ವಜನಿಕರಿಂದ ಹಣ ಪಡೆಯುವುದನ್ನೇ ಇಲ್ಲಿ ಕೆಲವರು ದಂಧೆಯನ್ನಾಗಿಸಿಕೊಂಡಿದ್ದಾರೆ ಎಂಬ ದೂರುಗಳು ಕೇಳಿಬರುತ್ತಿವೆ.

ಇತ್ತೀಚೆಗೆ ಸರಕಾರ ಪ್ರತಿ ಇಲಾಖೆಯಲ್ಲಿಯೂ ಸಹ ಆಡಳಿತ ವ್ಯವಸ್ಥೆಯನ್ನು ಸುಗಮವಾಗಿಸಲು ಮತ್ತು ಪಾರದರ್ಶಕತೆಯಿಂದ ಕೂಡಿರಬೇಕೆನ್ನುವ ಉದ್ದೇಶದಿಂದ ಆನ್‌ಲೈನ್ ವ್ಯವಸ್ಥೆ ಹಾಗೂ ನೇರವಾಗಿ ಸಾರ್ವಜನಿಕರೇ ಕಚೇರಿಗೆ ಆಗಮಿಸಿ ಅರ್ಜಿಯನ್ನು ಸಲ್ಲಿಸಬೇಕೆಂದು ಸೂಚನೆ ನೀಡುತ್ತಿರುವುದು ಶ್ಲಾಘನೀಯ. ಆದರೆ ಈ ವ್ಯವಸ್ಥೆಗೆ ಮಾರಕವೆಂಬಂತೆ ಮಧ್ಯವರ್ತಿಗಳು ಹಾಗೂ ಏಜೆಂಟರುಗಳು ಸರಕಾರದ ನಿಯಮಗಳನ್ನು ಗಾಳಿಗೆ ತೂರುತ್ತಿದ್ದಾರೆ. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಇದಕ್ಕೆ ಬ್ರೇಕ್ ಹಾಕುವುದು ಅವಶ್ಯಕವಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಜಿಲ್ಲಾ ಉಪನೋಂದಣಿ ಅಧಿಕಾರಿ ಶಿವಕುಮಾರ ಅಪರಂಜಿ, ಉಪನೊಂದಣಾಧಿಕಾರಿ ಕಡೆಯಿಂದ ವರದಿ ತೆಗೆದುಕೊಂಡು ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಲಾಗುವುದು ಎಂದರು.

ಈ ಕುರಿತು ಪ್ರತಿಕ್ರಿಯಿಸಿದ ಅಖಿಲ ಕರ್ನಾಟಕ ಡಿ.ಕೆ. ಶಿವಕುಮಾರ ಅಭಿಮಾನಿ ಸಂಘದ ತಾಲೂಕಾಧ್ಯಕ್ಷ ಬಸವರಾಜ ಕಂಬಳಿ ಹಾಗೂ ಉಪಾಧ್ಯಕ್ಷ ಜಗದೀಶ ಇಟ್ಟೇಕಾರ, ಶಿರಹಟ್ಟಿ ಉಪನೋಂದಣಿ ಕಚೇರಿಯಲ್ಲಿ ಇತ್ತೀಚಿನ ದಿನಗಳಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗುತ್ತಿದ್ದು, ಸಾರ್ವಜನಿಕರಿಂದ ಸರಕಾರದ ಶುಲ್ಕಕ್ಕಿಂತ ಹೆಚ್ಚಿನ ಹಣ ವಸೂಲಿ ಮಾಡುತ್ತಿರುವ ಆರೋಪ ಕೇಳಿಬರುತ್ತಿದೆ. ಇದನ್ನು ಸಂಬಂಧಿಸಿದ ಅಧಿಕಾರಿಗಳು ನಿಯಂತ್ರಿಸಬೇಕು ಎಂದರು.



ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಎಮ್.ಜಿ. ಮುಳೆ ಅವರು ಗದಗ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಕಲ್ಲಯ್ಯಜ್ಜನವರ ಆಶೀರ್ವಾದ ಪಡೆದು ಸನ್ಮಾನ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಯುವ ಮುಖಂಡ ಮಂಜುನಾಥ್ ದಾಮೋದರ್ ಉಪಸ್ಥಿತರಿದ್ದರು.

**ಅರ್ಧಕ್ಕೇ ನಿಂತ ಡಾ. ಅಂಬೇಡ್ಕರ್ ವೃತ್ತ ಕಾಮಗಾರಿ । ಪುರಸಭೆ ಮುಖ್ಯಾಧಿಕಾರಿ ವಿರುದ್ಧ ಅಸಮಾಧಾನ**

# ದಲಿತ ವಿರೋಧಿ ನೀತಿ ಕೈಬಿಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಗದಗ ರಸ್ತೆಗೆ ಹೊಂದಿಕೊಂಡಿರುವ ಡಾ. ಬಾಬಾಸಾಹೇಬ್ ಅಂಬೇಡ್ಕರ್ ನಗರದ ಹತ್ತಿರ ನಿರ್ಮಾಣಗೊಳ್ಳಲಿರುವ ಡಾ.ಅಂಬೇಡ್ಕರ್ ವೃತ್ತದ ಕಾಮಗಾರಿ ಸುಮಾರು 6–7 ತಿಂಗಳಿಂದ ನಿಂತು ಹೋಗಿದ್ದು, ಇದಕ್ಕೆ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರು ದಲಿತ ವಿರೋಧಿ ನೀತಿ ಅನುಸರಿಸುತ್ತಿದ್ದಾರೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಮಿತಿಯ ಸಂಘಟನಾ ಸಂಚಾಲಕ ಸದಾನಂದ ಅಶೋಕ ನಂದೆಣ್ಣವರ ಆರೋಪಿಸಿದ್ದಾರೆ.

ಶುಕ್ರವಾರ ಡಾ. ಬಿಆರ್. ಅಂಬೇಡ್ಕರ್ ಅವರ ಮಹಾಪರಿನಿರ್ವಾಣ ದಿನದಂದು ಕಾಮಗಾರಿ ನಿಂತುಹೋಗಿರುವ ವೃತ್ತದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ತಮ್ಮ ಅಕ್ರೋಶ ಹೊರಹಾಕಿದರು. ಈ ವೇಳೆ ಸ್ಥಳಕ್ಕೆ ಆಗಮಿಸಿದ ಮುಖ್ಯಾಧಿಕಾರಿ ಮಹೇಶ ಹಡಪದ ಅವರನ್ನು ಅಲ್ಲಿನ ನಿವಾಸಿಗಳು ತರಾಟೆಗೆ ತೆಗೆದುಕೊಂಡರು. ಈ ವೇಳೆ ಮಾತನಾಡಿದ ಸದಾನಂದ ನಂದೆಣ್ಣವರ, ನಗರೋತ್ಥಾನ



ಯೋಜನೆಯಡಿಯಲ್ಲಿ ಅಂಬೇಡ್ಕರ್ ನಗರದ ಜಾಗೆಯಲ್ಲಿ ಅಂಬೇಡ್ಕರ್ ವೃತ್ತವನ್ನು ನಿರ್ಮಾಣ ಮಾಡಲು 5 ಲಕ್ಷ ರೂಗಳ ಕಾಮಗಾರಿಯನ್ನು ಪ್ರಾರಂಭಿಸಲಾಗಿದ್ದು, ಕಾಮಗಾರಿ ಮುಂದುವರೆದಿಲ್ಲ ಎಂದು ಆರೋಪಿಸಿದರು.

ಗದುಗಿನಿಂದ ಬರುವ ರಸ್ತೆಗೆ ಹೊಂದಿಕೊಂಡಿರುವ ಈ ವೃತ್ತದ ಜಾಗೆಯಲ್ಲಿ ಡಾ.ಅಂಬೇಡ್ಕರ್ ಅವರ ಹೆಸರಿನಲ್ಲಿ ಸುಂದರವಾದ ಉದ್ಯಾನವನ್ನು ನಿರ್ಮಾಣ ಮಾಡಿದರೆ ಅದು ಊರಿಗೆ ಗೌರವದ ಪ್ರತೀಕವಾಗುತ್ತದೆ. ಅಲ್ಲದೆ ಮುಂದಿನ ದಿನಗಳಲ್ಲಿ ಈ ವೃತ್ತದಲ್ಲಿ ಡಾ. ಅಂಬೇಡ್ಕರ್‌ರ ಪುತ್ಥಳಿಯನ್ನು ಸ್ಥಾಪಿಸುವ ಚಿಂತನೆ ಹೊಂದಿದ್ದೇವೆ. ಆದರೆ ಕಾಮಗಾರಿಯೇ ಪೂರ್ಣವಾಗುತ್ತಿಲ್ಲ. ಕೂಡಲೇ ಅಧಿಕಾರಿಗಳು ಮುತುವರ್ಜಿ ವಹಿಸಿ ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಿ ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಬಸವಣ್ಣೆಪ್ಪ ನಂದೆಣ್ಣವರ, ಮನೋಹರ ಕರ್ಜಗಿ, ಮಹಾಂತೇಶ ಗುಡಿಸಲಮನಿ, ದ್ಯಾಮೇಶ ಮ್ಯಾಗೇರಿ, ಪರುಶುರಾಮ ಗಡದವರ, ಮಲ್ಲೇಶ ಬಸವನಾಯ್ಕರ, ನಿಂಗಪ್ಪ ಬಾಲಣ್ಣವರ, ಪೃಥ್ವಿ ನಂದೆಣ್ಣವರ, ಸಂತೋಷ ನಂದೆಣ್ಣವರ, ಮಂಜು ಮಾದರ ಮುಂತಾದವರಿದ್ದರು.

ಜನರ ಅಕ್ರೋಶವನ್ನು ಎದುರಿಸಿದ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ತಾಂತ್ರಿಕ ಸಮಸ್ಯೆಯಿಂದ ಕಾಮಗಾರಿ ವಿಳಂಬವಾಗಿದೆ. ಗುತ್ತಿಗೆದಾರರಿಗೆ ಈ ಕುರಿತು ನೋಟಿಸ್ ನೀಡಿ ಕಾಮಗಾರಿ ಪ್ರಾರಂಭಿಸಲು ಆದೇಶ ಮಾಡುವದಾಗಿ ಭರವಸೆ ನೀಡಿದರು.

**ಕರ್ನಾಟಕ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಅಭಿಯಂತರವರ ಕಛೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ,
ಸಿಂಗಟಾಲೂರು ಏತ ನೀರಾವರಿ ಯೋಜನೆ, ವಿಭಾಗ ನಂ.1, ಮುಂಡರಗಿ, ಗದಗ ಜಿಲ್ಲೆ.
Ph. No. 08371-295016 e-mail: eeslis1mdg@gmail.com

**ಅಲ್ಪಾವಧಿ ಟೆಂಡರ್ ಪ್ರಕಟಣೆ (ಎರಡನೇ ಕರೆ)**
**(ONLY THROUGH "e-Procurement" SYSTEM)**

**ಉಲ್ಲೇಖ:1.ಈ ಕಛೇರಿ ಟೆಂಡರ್ ಪ್ರಕಟಣೆ ಪತ್ರ ಸಂಖ್ಯೆ: 1260 /2024–25 ದಿನಾಂಕ: 05.12.2024**

ಸಿಂಗಟಾಲೂರು ಏತ ನೀರಾವರಿ ಯೋಜನೆಯ ಮುಂಡರಗಿ ವಿಭಾಗ–01 ಕಛೇರಿಯಡಿ ಬರುವ ಹಿರೇಹಳ್ಳ ಯೋಜನೆ, ಕಿನ್ನಾಳ ಉಪವಿಭಾಗ ಕಛೇರಿ ವ್ಯಾಪ್ತಿಯಲ್ಲಿ ಈ ಕೆಳಕಂಡ ಕಾಮಗಾರಿಯ ಉಲ್ಲೇಖ(1) ರಂತೆ ದ್ವಿ–ಲಕೋಟೆ ಪದ್ಧತಿಯಲ್ಲಿ ಅಲ್ಪಾವಧಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ.

| Sl. No | Name of work | Amount put to tender (Rs. in Lakhs) | EMD (in Rs.) |
|---|---|---|---|
| 1 | AME OF HIREHALLA DAM FOR THE YEAR 2024-25 (IndentNo. KNNL/202425/DA/WORK_INDENT 1999/CALL-2) | 24.99 (Including GST) | 50,000/- |

ಇನ್ನುಳಿದಂತೆ, ಸದರಿ ಟೆಂಡರಿಗೆ ಸಂಬಂಧಿಸಿದ ಷರತ್ತು/ನಿಯಮಾವಳಿಗಳ ಮಾಹಿತಿಯನ್ನು ಕೆಳಗೆ ಸಹಿ ಮಾಡಿರುವ ಅಧಿಕಾರಿಯವರ ಕಛೇರಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ ಹಾಗೂ **ದಿನಾಂಕ: 05.12.2024** ರ ನಂತರ "https://kppp.karnataka.gov.in" ವೆಬ್‌ಸೈಟ್‌ನಲ್ಲಿ ಟೆಂಡರ್ ಡಾಕ್ಯೂಮೆಂಟ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಬಿಡ್‌ನ್ನು ಸಲ್ಲಿಸಬಹುದಾಗಿರುತ್ತದೆ. ಸದರಿ ಕಾಮಗಾರಿಯ ಟೆಂಡರ್‌ಗೆ ಬಿಡ್ಡನ್ನು ಸಲ್ಲಿಸಲು ಕೊನೆಯ ದಿನಾಂಕ: 16.12.2024 ಎಂದು ಮತ್ತು ಟೆಂಡರ್ ತಾಂತ್ರಿಕ ಬಿಡ್ಡನ್ನು ತೆರೆಯುವ ದಿನಾಂಕ: 18.12.2024 ಎಂದು ನಿಗದಿಪಡಿಸಿದೆ. ಇನ್ನಿತರೆ ಹೆಚ್ಚಿನ ಮಾಹಿತಿಯನ್ನು e-procurement Helpdesk Phone No's: +91-80-46010000, +91-80-68948777 ಅನ್ನು ಸಂಪರ್ಕಿಸಿ ಪಡೆಯಬಹುದಾಗಿದೆ. ನಿಬಂಧನೆಗೊಳಪಟ್ಟ ಟೆಂಡರ್‌ನ್ನು ತಿರಸ್ಕರಿಸಲಾಗುವುದು. ಟೆಂಡರ್‌ನ್ನು ಸ್ವೀಕರಿಸುವ ಅಧಿಕಾರ, ಪಡೆಯುವ ಅಧಿಕಾರಿಯು ಯಾವುದೇ ಟೆಂಡರ್‌ನ್ನು ಕಾರಣ ನೀಡದೆ ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.

**ಸಹಿ/–**
**ಕಾರ್ಯಪಾಲಕ ಅಭಿಯಂತರರು,**
**ಸಿಂಗಟಾಲೂರು ಏತ ನೀರಾವರಿ ಯೋಜನೆ,**
**ನಂ. 1 ವಿಭಾಗ, ಕರ್ನಾಟಕ ನೀರಾವರಿ ನಿಗಮ ನಿಯಮಿತ,**
**ಮುಂಡರಗಿ, ಗದಗ ಜಿಲ್ಲೆ.**

ವಾ.ಸಾ.ಇ/ಗದಗ/445/ದೇಶಪಾಂಡೆಪಬ್ಲಿಸಿಟಿ/2024–25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka